ವಿಜಯಪುರ | ಸಂಪುಟ 04 | ಸಂಚಿಕೆ 041 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಬುಧವಾರ, ಏಪ್ರಿಲ್, 01, 2026

"ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ನಾಡಿನ ಖಾಸಗಿ ಕಂಪನಿಗಳು ಮೂಲಸೌಕರ್ಯ ಒದಗಿಸಲು ಹಾಗೂ



ಪೀಠೋಪಕರಣಗಳು ಸೇರಿದಂತೆ ಅಗತ್ಯ ಸಹಾಯ-ದೇಣಿಗೆ ನೀಡಿದರೆ ಆ ಶಾಲೆಗಳು ಪ್ರಗತಿ ಹೊಂದಲು ಸಾಧ್ಯ."

■ ಅಶೋಕ್ ಮನಗೂಳಿ
ಶಾಸಕರು, ಸಿಂದಗಿ

# ಏ.1 ರಿಂದ ಸ್ವಯಂ ಗಣತಿಯಲ್ಲಿ ಭಾಗವಹಿಸಲು ಅವಕಾಶ

## ವಿಜಯಪುರದಲ್ಲಿ ನಡೆದ ಜನಗಣತಿ ಕುರಿತ ಪೂರ್ವಭಾವಿ ಸಿದ್ಧತೆ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ. ಆನಂದ.ಕೆ ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜನಗಣತಿಯು ದೇಶದ ಜನಸಂಖ್ಯೆಯ ಗಣತಿಯ ಜೊತೆಗೆ, ದೇಶದ ಸಾಮಾಜಿಕ-ಆರ್ಥಿಕ ಸ್ಥಿತಿಗಳು ಮತ್ತು ಸಾಂಸ್ಕೃತಿ-ಕ ವೈವಿಧ್ಯತೆಯನ್ನು ದಾಖಲಿಸುವ ವೈಜ್ಞಾನಿಕ ಪ್ರಕ್ರಿಯೆಯಾಗಿದ್ದು ಭಾರತದ ಮೊದಲ ಡಿಜಿಟಲ್ ಜನಗಣತಿ ಮತ್ತು 16 ನೇ

ಜನಗಣತಿಯು ಏಪ್ರಿಲ್ ನಿಂದ 2 ಹಂತದಲ್ಲಿ ಆರಂಭಗೊಳ್ಳಲಿದೆ.

**ಸ್ವಯಂ ಗಣತಿಗೆ ಹೀಗೆ ಮಾಡಿ**

ಜನಗಣತಿಯ ಸುರಕ್ಷಿತ ವೆಬ್ ಪೋರ್ಟಲ್: https://se.census.gov.in ಗೆ ಮೊಬೈಲ್ ಸಂಖ್ಯೆ ಮತ್ತು ಒಟಿಪಿ ಬಳಸಿ ಲಾಗಿನ್ ಆಗಿ. ಬಳಿಕ ನಿಮ್ಮ ಸ್ಥಳ ಆಯ್ಕೆ ಮಾಡಿ. ನಕ್ಷೆಯಲ್ಲಿ ನಿಮ್ಮ ಮನೆ ಗುರುತಿಸಿ. ಬಳಿಕ ಮನೆಯ ಇಲ್ಲವೇ ಕುಟುಂಬದ ವಿವರ ಭರ್ತಿ ಮಾಡಿ, ನಿಮ್ಮ ಖಇ ಖಜಜಿಜಡಿಜಟಿಭಿಜ ಖಆ ಪಡೆಯಿರಿ.ಈಗ ಬಂದಿರುವ ನಿಮ್ಮ ಖಇ ಖಆ ಅನ್ನು ಸುರಕ್ಷಿತವಾಗಿ ಇಟ್ಟು, ಇಟಿಣಟಜಡಿಚಿಣಂಡಿ ಮನೆಗೆ ಬಂದಾಗ ಅದನ್ನು ಅವರೊಂದಿಗೆ ಹಂಚಿಕೊಳ್ಳಬೇಕು.

**ಕ್ಷೇತ್ರ ಪರಿಶೀಲನೆ**

ಏ.16 ರಿಂದ ಮೇ.15 ರವರೆಗಿನ ಅವಧಿಯಲ್ಲಿ ಗಣತಿದಾರರು ಮನೆಗೆ ಭೇಟಿ ನೀಡಿ ವಿವರಗಳನ್ನು ಪರಿಶೀಲಿಸುತ್ತಾರೆ.

ಒಂದು ವೇಳೆ ಸ್ವಯಂ ಗಣತಿ ಪೂರ್ಣಗೊಳಿಸದಿದ್ದರೆ, ಅವರು ನಿಮ್ಮಿಂದಲೇ ಮಾಹಿತಿಯನ್ನು ಸಂಗ್ರಹಿಸುತ್ತಾರೆ. ಈ ಅವಧಿಯಲ್ಲಿ ಶೇ.100ರಷ್ಟು ಗೌಪ್ಯತೆ ಇಟ್ಟು ನಿಮ್ಮ ಸ್ವಯಂ ಗಣತಿಯನ್ನು ಪೂರ್ಣಗೊಳಿಸಲು ಅವಕಾಶ ಕಲ್ಪಿಸಲಾಗಿದೆ. ಜಿಲ್ಲೆಯ ಜನತೆ ಇದರ ಸದುಪಯೋಗ ಪಡೆದುಕೊಂಡು ಜನಗಣತಿಯಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮನೆ ಪಟ್ಟಿ ಮತ್ತು ಮನೆಗಣತಿ ಕಾರ್ಯವು ಏ.16 ರಿಂದ ಆರಂಭವಾಗಲಿದ್ದು, ಇದಕ್ಕೂ ಮುನ್ನ 15 ದಿನಗಳ ಮುಂಚಿತವಾಗಿ ಅಂದರೆ ಏಪ್ರಿಲ್ 1 ರಿಂದ 15 ವರೆಗೆ ಸ್ವಯಂ ಗಣತಿ ಕಾರ್ಯಕ್ಕೆ ಅವಕಾಶ ನೀಡಲಾಗಿದೆ ಎಂದವರು ತಿಳಿಸಿದ್ದಾರೆ.

ಏ. 1ರಿಂದ ಏ.15 ರವರೆಗೆ ಸ್ವಯಂ ಗಣತಿ ವೆಬ್ ಪೋರ್ಟಲ್ ಲಭ್ಯವಿದೆ. ಮೊಬೈಲ್, ಡೆಸ್ಕ್ ಟಾಪ್, ಲ್ಯಾಪ್ ಟಾಪ್ ಸಾಧನಗಳ ಮೂಲಕ ನಮೂದಿಸಬಹುದು. ಇದರಿಂದ ಸಮಯದ ಉಳಿತಾಯ ಜೊತೆಗೆ ನಿಖರ ಹಾಗೂ ಸಮಗ್ರ ಮಾಹಿತಿಯನ್ನು ಸಂಗ್ರಹಿಸಲು ಸಹಕಾರಿ ಆಗಲಿದೆ.

ಮಾಹಿತಿ ಭರ್ತಿಯ ವೇಳೆ, ಕುಟುಂಬಗಳು ತಮ್ಮ ಸ್ಥಳದ ವಿವರಗಳನ್ನು (ರಾಜ್ಯ, ಜಿಲ್ಲೆ, ತಾಲ್ಲೂಕು, ಗ್ರಾಮ/ಪಟ್ಟಣ/ನಗರ ಇತ್ಯಾದಿ) ಕಡ್ಡಾಯವಾಗಿ ನಮೂದಿಸಬೇಕು. ಸ್ಥಳವನ್ನು ನಿಖರವಾಗಿ ಗುರುತಿಸಲು ಪಿನ್ ಕೋಡ್ ಮತ್ತು ಡಿಜಿಟಲ್ ಮ್ಯಾಪ್ ಮೂಲಕ ಮನೆಯ ಸ್ಥಳವನ್ನು ಗುರುತಿಸುವ ವ್ಯವಸ್ಥೆಯೂ ಇರುತ್ತದೆ.

ಸ್ವಯಂ-ಗಣತಿ (Self-Enumeration) ಪೋರ್ಟಲ್ ನಲ್ಲಿ ಕೇಳಿರುವ ಕೇಳುವ ಪ್ರಶ್ನೆಗಳಿಗೆ ಮನೆಪಟ್ಟಿ ಕಾರ್ಯಾಚರಣೆ ಮೊಬೈಲ್ ಆಪ್ ನಲ್ಲಿರುವಂತೆಯೇ ರೂಪಿಸಲಾಗಿದ್ದು, ಕೆಲವು ಮಾಹಿತಿಗಳು ಪೂರ್ವ ಭರ್ತಿಯಾಗಿರಬಹುದು. ಸಾರ್ವಜನಿಕರಿಗೆ ಸಹಾಯವಾಗುವಂತೆ ಪದೇ ಪದೇ ಕೇಳುವ ಪ್ರಶ್ನೆಗಳು (FAQs) ಮತ್ತು ಮಾರ್ಗಸೂಚಿಗಳನ್ನೂ ಒದಗಿಸಲಾಗಿದೆ.

ಕುಟುಂಬವು ತಮ್ಮ ಮಾಹಿತಿಯನ್ನು ಯಶಸ್ವಿಯಾಗಿ ಸಲ್ಲಿಸಿದ ನಂತರ, ಅವರಿಗೆ ಒಂದು ವಿಶಿಷ್ಟ ಸ್ವಯಂ-ಗಣತಿ ಐಡಿ (Self-Enumeration ID) ನೀಡಲಾಗುತ್ತದೆ. ಈ ಐಡಿಯನ್ನು ಎಸ್ ಎಂ-ಎಸ್ ಮತ್ತು ಇಮೇಲ್ ಮೂಲಕ ಕಳುಹಿಸಲಾಗುತ್ತದೆ. ಅದನ್ನು ಮನೆಗೆ ಭೇಟಿ ನೀಡುವ ಗಣತಿದಾರರಿಗೆ (Enumerator) ಈ ಐಡಿಯನ್ನು ಸಾರ್ವಜನಿಕರು ಹಂಚಿಕೊಳ್ಳಬಹುದು.

ಒಂದು ವೇಳೆ ಸಾರ್ವಜನಿಕರು ತಮ್ಮ ಸ್ವಯಂ ಗಣತಿ ಪೂರ್ಣಗೊಳಿಸದಿದ್ದರೆ, ಗಣತಿದಾರರು ತಮ್ಮಿಂದಲೇ ಮಾಹಿತಿಯನ್ನು ಸಂಗ್ರಹಿಸುತ್ತಾರೆ.

ಸ್ವಯಂ ಗಣತಿಯು ಶೇ. 100 ರಷ್ಟು ಗೌಪ್ಯತೆಯ ಭದ್ರತೆ ನೀಡಲಿದ್ದು, ಪ್ರತಿಯೊಬ್ಬರೂ ಸ್ವಯಂ ಗಣತಿಯನ್ನು ಪೂರ್ಣಗೊಳಿಸಿ, ದೇಶದ ಜವಾಬ್ದಾರಿಯುತ ನಾಗರಿಕರಾಗಬೇಕಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ.

# ಕಬ್ಬಿನ ಬಿಲ್ ಪಾವತಿಗೆ ಆಗ್ರಹಿಸಿ ಆಹೋರಾತ್ರಿ ಧರಣಿ ಸತ್ಯಾಗ್ರಹ



■ ಉದಯರಶ್ಮಿ ದಿನಪತ್ರಿಕೆ

ಜಮಖಂಡಿ: ನಗರದ ತಾಲೂಕು ಆಡಳಿತ ಸೌಧದ ಮುಂಭಾಗದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಕೃಷ್ಣಾ ತೀರ ಹೋರಾಟ ಸಮಿತಿ ವತಿಯಿಂದ 2025-26ನೇ ಸಾಲಿನ ಕಬ್ಬಿನ ಬಿಲ್ ಪಾವತಿಗೆ ಆಗ್ರಹಿಸಿ ಆಹೋರಾತ್ರಿ ಧರಣಿ ಸತ್ಯಾಗ್ರಹ ಆರಂಭಿಸಲಾಗಿದೆ.

ಪ್ರತಿಭಟನೆಯಲ್ಲಿ ರೈತ ಸಂಘದ ಮುಖಂಡ ಚೂನ್ನಪ್ಪ ಪೂಜಾರಿ ಮಾತನಾಡಿ, ಕಬ್ಬು ಬೆಳೆಗಾರ-ರಿಗೆ ಕಾನೂನು ಪ್ರಕಾರ 14 ದಿನಗಳಲ್ಲಿ ಬಾಕಿ ಹಣ ಪಾವತಿಸಬೇಕಿದ್ದರೂ 3 ರಿಂದ 4 ತಿಂಗಳು ಕಳೆದರೂ ಹಣ ನೀಡದೇ ರೈತರನ್ನು ಸಂಕಷ್ಟಕ್ಕೆ ತಳ್ಳಲಾಗಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಸುಮಾರು 3,500 ಕೋಟಿ ಕಬ್ಬಿನ ಬಿಲ್ಲು ಬಾಕಿ ಉಳಿದಿದ್ದು ಬಾಗಲಕೋಟೆ, ವಿಜಯಪುರ, ಬೆಳಗಾವಿ ಜಿಲ್ಲೆಗಳ ರೈತರು ಹೆಚ್ಚಿನ ತೊಂದರೆ ಅನುಭವಿಸುತ್ತಿದ್ದಾರೆ ಎಂದರು. ಸರ್ಕಾರ ಹಾಗೂ ಅಧಿಕಾರಿಗಳು ರೈತರ ಸಮಸ್ಯೆ ಕಡೆ ನಿರ್ಲಕ್ಷ್ಯ ವಹಿಸಿರುವುದನ್ನು ಟೀಕಿಸಿದ ಅವರು, ಚುನಾವಣೆ ಸಮಯದಲ್ಲಿ ಮಾತ್ರ ರಾಜಕೀಯ ನಾಯಕರು ರೈತರ ಬಳಿ ಬರುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು. ಬಾಕಿ ಹಣವನ್ನು ತಕ್ಷಣ ಪಾವತಿಸದಿದ್ದರೆ ರಾಜ್ಯಾದ್ಯಂತ ಹೋರಾಟ ತೀವ್ರಗೊಳಿಸಲಾಗುವುದು ಎಂದು ಎಚ್ಚರಿಸಿದರು.

ನ್ಯಾಯವಾದಿ ಯಲ್ಲಪ್ಪ ಹೆಗಡೆ ಮಾತನಾಡಿ, ಕಬ್ಬಿನ ಬಾಕಿ ಸಮಸ್ಯೆಯ ಜೊತೆಗೆ ಕೆಲವು ಖಾಸಗಿ ಸಕ್ಕರೆ ಕಾರ್ಖಾನೆಗಳು ತೂಕದಲ್ಲಿ ಮೋಸ ಮಾಡುತ್ತಿರುವುದನ್ನು ಗಂಭೀರವಾಗಿ ಉಲ್ಲೇಖಿಸಿದರು. ತೂಕದ ಯಂತ್ರಗಳನ್ನು ಅಳವಡಿಸುವ ಕುರಿತು ಸರ್ಕಾರ ನೀಡಿದ ಭರವಸೆ ಇನ್ನೂ ಜಾರಿಗೆ ಬಂದಿಲ್ಲ ಎಂದು ಟೀಕಿಸಿದರು.

ರೈತ ಮುಖಂಡ ರಾಜು ನದಾಫ್ ಮಾತನಾಡಿ, ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಕಾರ್ಖಾನೆ ಮಾಲೀಕರ ಮೇಲೆ ಒತ್ತಡ ಹೇರಿ ರೈತರ ಬಾಕಿ ಪಾವತಿಸದಿದ್ದರೆ ಮುಖ್ಯಮಂತ್ರಿ ಬಾಗಲಕೋಟೆ ಜಿಲ್ಲೆಗೆ ಪ್ರವೇಶಿಸಲು ಅವಕಾಶ ನೀಡುವುದಿಲ್ಲ ಎಂದು ಎಚ್ಚರಿಸಿದರು.

ಗುಡುಸಾಬ ನದಾಫ್ ಮಾತನಾಡಿದರು. ರೈತರು ಒಗ್ಗಟ್ಟಾಗಿ ಹೋರಾಡಿದರೆ ಮಾತ್ರ ನ್ಯಾಯಸಿಗುತ್ತದೆ ಎಂದು ಮುಖಂಡರು ಕರೆ ನೀಡಿದ್ದು, "ನಮ್ಮ ಹಕ್ಕಿನಹಣ ಸಿಗುವವರೆಗೆ ಹೋರಾಟ ನಿಲ್ಲುವುದಿಲ್ಲ" ಎಂದು ಸ್ಪಷ್ಟಪಡಿಸಿದರು.

ಮಲ್ಲಪ್ಪ ಅಂಗಡಿ, ಕಿರಣ ಕವಟಗೊಪ್ಪ, ತುಕಾರಾಮ ಮ್ಯಾಗಿನಮನಿ, ಅಜೇಯ ಕುಲಕರ್ಣಿ, ಕುಮಾರ ಪವಾರ, ಸಿದ್ದನಗೌಡ ಪಾಟೀಲ, ಶ್ರೀಶೈಲ ದೇಸಾಯಿ ಶಿವಲಿಂಗ ತುಬಚಿ, ಶ್ರೀಶೈಲ ಭೂಮಾರ, ಹನುಮಂತ ಮಗದುಮ, ಸಿದ್ದಪ್ಪ ಬಣಜನವರ, ಕಲ್ಲಪ್ಪ ಬಿರಾದಾರ, ಸೇರಿದಂತೆ ಸುತ್ತಲಿನ ನೂರಾರು ರೈತರು ಪ್ರತಿಭಟನೆಯಲ್ಲಿದ್ದರು.

# ಸಿಂದಗಿಯಲ್ಲಿ ಎ.27-28 ರಂದು ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನ

## 21ನೆಯ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆಯಲ್ಲಿ ಶಾಸಕ ಅಶೋಕ ಮನಗೂಳಿ ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ಜಿಲ್ಲಾ ಸಮ್ಮೇಳನವನ್ನು ಏಪ್ರಿಲ್ ಪ್ರಥ-ಮ ವಾರದಲ್ಲಿ ಹಮ್ಮಿಕೊಳ್ಳಲು ನಿಶ್ಚಯಿಸಲಾಗಿತ್ತು. ಆದರೆ ಪ್ರಥಮ ವಾರದಲ್ಲಿ ಪರೀಕ್ಷೆಗಳು ಹಾಗೂ ಮೌಲ್ಯಮಾಪನ, ದ್ವಿತೀಯ ವಾರದಲ್ಲಿ ಅಂಬೇಡ್ಕರ್ ಜಯಂತಿ, ಮೂರನೇ ವಾರದಲ್ಲಿ ಬಸವ ಜಯಂತಿಯ ಕಾರ್ಯಕ್ರಮಗಳು ಇರುವುದರಿಂದ ಏಪ್ರಿಲ್ ಕೊನೆಯ ವಾರ 27 ಮತ್ತು 28ರಂದು ಹಮ್ಮಿಕೊಳ್ಳಲು ತೀರ್ಮಾನಿಸಲಾಗಿದ್ದು ಅಧಿಕೃತ ದಿನಾಂಕವನ್ನು ಮುಂದಿನ ಸಭೆಯಲ್ಲಿ ತಿಳಿಸಲಾಗುವುದು ಎಂದು ಶಾಸಕ ಅಶೋಕ ಮನಗೂಳಿ ಹೇಳಿದರು.

ಸಿಂದಗಿ ನಗರದ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಹಮ್ಮಿಕೊಂಡ 21ನೆಯ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು, ಸುದೀರ್ಘ 14ವರ್ಷಗಳ ಅವಧಿಯ ನಂತರ ಸಿಂದಗಿ ತಾಲೂಕಿಗೆ ಜಿಲ್ಲಾ ಸಾಹಿತ್ಯ ಸಮ್ಮೇಳನದ ಭಾಗ್ಯ ಒದಗಿ ಬಂದಿದ್ದು, ಸಮ್ಮೇಳನದ ಯಶಸ್ಸಿಗೆ ಎಲ್ಲ ಇಲಾಖೆಯ ಅಧಿಕಾ-ರಿಗಳು, ಸಾರ್ವಜನಿಕರು, ಮಹಿಳೆಯರು, ಹಿರಿಯ ಮತ್ತು ಕಿರಿಯ ಕವಿಗಳು, ಸಾಹಿತ್ಯಾಸಕ್ತರು ಮತ್ತು ಮಕ್ಕಳು ಕಂಕಣಬದ್ಧರಾಗಬೇಕು. ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷರು ಹಾಗೂ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ಸರ್ವ ಪದಾಧಿಕಾರಿಗಳ ಮುತುವರ್ಜಿ ಹಾಗೂ ಆಸಕ್ತಿಯಿಂದಾಗಿ ಸಮ್ಮೇಳನ ಆಯೋಜನೆಯಾಗಿರುವುದು ಹರ್ಷದಾಯಕ. ಸಮ್ಮೇಳನಕ್ಕೆ ಸಾಕಷ್ಟು ಖರ್ಚು ವೆಚ್ಚಗಳಿದ್ದು ದಾನಿಗಳು ಉದಾರ ಹಸ್ತದಿಂದ ಸಾಕಾರ ನೀಡಬೇಕು. ಅಲ್ಲದೇ ತಾಲೂಕಿನ ಎಲ್ಲ ಇಲಾಖೆಗಳ ಅಧಿಕಾರಿಗಳಿಗೂ ಕನ್ನಡ ನಾಡು ನುಡಿಯ ಅಸ್ಮಿತೆಯ ಬಗ್ಗೆ ಅಪಾರ ಗೌರವವಿದ್ದು, ಸಮ್ಮೇಳನ ಸಮಯದಲ್ಲಿ ಅದನ್ನು ಅವರು ಸಾದರಪಡಿಸಬೇಕು. ಅಲ್ಲದೆ ಸಕ್ರಿಯವಾಗಿ ಪಾಲ್ಗೊಂಡು ಕೆಲಸ ಕಾರ್ಯಗಳಲ್ಲಿ ಕೈಜೋಡಿಸಬೇಕು. ಸಮ್ಮೇಳನದಲ್ಲಿ ಸರ್ವಾಧ್ಯಕ್ಷರ ಮೆರವಣಿಗೆ, ಕುಂಭಮೇಳ, ಬುತ್ತಿ ಜಾತ್ರೆ, ವಿವಿಧ ಕಲಾತಂಡಗಳಿಂದ ಮೆರವಣಿಗೆ ಕಾರ್ಯಕ್ರಮ ಇರುತ್ತವೆ. ಇವೆಲ್ಲವುಗಳ ಜೊತೆಗೆ ಊಟೋಪಚಾರ, ವಸತಿ ಸೌಲಭ್ಯಗಳನ್ನು ಅಚ್ಚುಕಟ್ಟಾಗಿ ಆಯೋಜಿಸಿದಾಗ ಮಾತ್ರ ಸಮ್ಮೇಳನ ಯಶಸ್ವಿಯಾಗುತ್ತದೆ. ಸಿಂದಗಿ ನಗರದ ಕೀರ್ತಿ ನಾಡಿಗೆಲ್ಲ ಹಬ್ಬುವಂತೆ ಸಮ್ಮೇಳನದಲ್ಲಿ ಸಾಹಿತ್ಯಾಸಕ್ತರು, ಸಾರ್ವಜನಿಕರು, ಮಕ್ಕಳು, ಮಹಿಳೆಯರು ಭಾಗವಹಿಸಿ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ನವಿ ಮಾಡಿದರು.

ಈ ವೇಳೆ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲೀಕಾರ, ತಾಲೂಕಾಧ್ಯಕ್ಷ ವಾಯ್.ಸಿ ಮಯೂರ್ ಮಾತನಾಡಿ, ಕನ್ನಡದ ಸಹೃದಯಿ ಮನಸುಗಳೆಲ್ಲ ಸೇರಿ ಕನ್ನಡದ ನುಡಿ ಜಾತ್ರೆಯನ್ನು ಯಶಸ್ವಿಯಾಗಿ ಸಂಪನ್ನಗೊಳಿಸುವಲ್ಲಿ ತನು, ಮನ, ದನದಿಂದ ಸಹಕಾರ ನೀಡಬೇಕೆಂದು ವಿನಂತಿಸಿದರು.

ಕಾರ್ಯಕ್ರಮದ ವೇದಿಕೆಯ ಮೇಲೆ ಸಿಂದಗಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಗೌರವಾಧ್ಯಕ್ಷ ಮಹಾಂತೇಶ ಪಟ್ಟಣಶೆಟ್ಟಿ, ದೇವರ ಹಿಪ್ಪರಗಿ ತಾಲೂಕಾಧ್ಯಕ್ಷ, ಸಿದ್ದು ಮೇಲಿನಮನಿ, ಆಲಮೇಲ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಅಶೋಕ ಕೊಳಾರಿ, ತಾಲೂಕ ಪಂಚಾಯತ್ ಇಒ ರಾಮು ಅಗ್ನಿ ಇದ್ದರು. ಸಿಂದಗಿ ತಾಲೂಕ ಕನ್ನಡ ಸಾಹಿತ್ಯ ಪರಿಷತ್ ಗೌರವ ಕಾರ್ಯದರ್ಶಿ ಆನಂದ್ ಶಾಬಾದಿ ಕಾರ್ಯಕ್ರಮ ನಿರ್ವಹಿಸಿದರು. ತಾಲೂಕಿನ ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

# ಅಪಘಾತ: ಸ್ಥಳದಲ್ಲೇ ಬೈಕ್ ಸವಾರರೀರ್ವರ ಸಾವು!



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಎರಡು ಬೈಕ್ ಗಳ ಮದ್ಯ ಮುಖಾಮುಖಿ ಡಿಕ್ಕಿಯಾದ ಪರಿಣಾಮ ಬೈಕ್ ಸವಾರರಿಬ್ಬರು ಸ್ಥಳದಲ್ಲೇ ಮೃತಪಟ್ಟ ಘಟನೆ ಜಿಲ್ಲೆಯ ಬಸವನಬಾಗೇವಾಡಿಯ ತಾಲೂಕಿನ ಮಸಬಿನಾಳ ಬಳಿ ಸಂಭವಿಸಿದೆ.

ಇಂಗಳೇಶ್ವರ ತಾಂಡಾದ ಸಂತೋಷ ಲಾಲು ಚವಾಣ್ (32) ಮತ್ತುದೇಗಿನಾಳ ಗ್ರಾಮದ ಭೀಮನಗೌಡ ಪಾಟೀಲ (45) ಮೃತ ದುರ್ದೈವಿಗಳು.

ಇನ್ನು ಅಪಘಾತದಲ್ಲಿ ಓರ್ವ ಗಂಭೀರ ಗಾಯಗೊಂಡಿದ್ದು ಗಾಯಾಳುಗಳನ್ನು ಚಿಕಿತ್ಸೆಗಾಗಿ ಬಸವನಬಾಗೇವಾಡಿ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದೆ. ಘಟನಾ ಸ್ಥಳಕ್ಕೆ ಮನಗೂಳಿ ಪೊಲೀಸರು ಭೇಟಿ ಪರಿಶೀಲನೆ ನಡೆಸಿದ್ದಾರೆ. ಮನಗೂಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ಸಂಭವಿಸಿದೆ.

# ಭೀಕರ ಅಪಘಾತ: ಬೆಂಕಿಯ ಕೆನ್ನಾಲಿಗೆಗೆ ಬೈಕ್ ಸವಾರ ಬಲಿ!

## ಸಿಂದಗಿ ಬಳಿಯ ಕನ್ನೊಳ್ಳಿ ಟೋಲ್‌ಗೇಟ್ ಬಳಿ ಘೋರ ದುರಂತ । ಕೂದಲೆಳೆ ಅಂತರದಲ್ಲಿ ಪ್ರಯಾಣಿಕರು ಪಾರು । ಮೃತ ಯುವಕನ ಸೆಲ್ಫಿ ವಿಡಿಯೋದಿಂದ ಆ್ಯಕ್ಸಿಡೆಂಟ್ ಕೇಸ್‌ಗೆ ಮೇಜರ್ ಟ್ವಿಸ್ಟ್

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಸಿಂದಗಿ ಬಳಿ ಮಂಗಳವಾರ ಮಧ್ಯಾಹ್ನ ಮೈ ಜುಂ ಎನ್ನುವಂತಹ ಭೀಕರ ಅಪಘಾತ ಸಂಭವಿಸಿದೆ. ಖಾಸಗಿ ಬಸ್ ಮತ್ತು ಬೈಕ್ ನಡುವೆ ನಡೆದ ಮುಖಾಮುಖಿ ಡಿಕ್ಕಿಯಿಂದಾಗಿ ಬೈಕ್ ಸವಾರ ಸ್ಥಳದಲ್ಲೇ ಸಜೀವ ದಹನವಾಗಿದ್ದು, ಇಡೀ ಬಸ್ ಅಗ್ನಿಗಾಹುತಿಯಾಗಿದೆ.

ಜಿಲ್ಲೆಯ ಸಿಂದಗಿ ತಾಲೂಕಿನ ಕನ್ನೊಳ್ಳಿ ಟೋಲ್‌ಗೇಟ್ ಬಳಿ ಬಸ್ ಹಾಗೂ ಬೈಕ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಬೈಕ್ ಸವಾರ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ದೇವರಹಿಪ್ಪರಗಿ ತಾಲೂಕಿನ ಮುಳಸಾವಳಗಿ ಗ್ರಾಮದ ನಿವಾಸಿ ಅಭಿಷೇಕ್ ಸಾಹೇಬಗೌಡ ನಾಗರಾಳ (22) ಎಂಬುವವರೇ ಬೆಂಕಿಯ ಕೆನ್ನಾಲಿಗೆಗೆ ಸಿಲುಕಿ ಸಜೀವ ದಹನವಾದ ದುರ್ದೈವಿ.

ಡಿಕ್ಕಿಯ ರಭಸಕ್ಕೆ ಬೈಕ್‌ನ ಪೆಟ್ರೋಲ್ ಟ್ಯಾಂಕ್ ಸ್ಫೋಟಗೊಂಡು ಬೆಂಕಿ ಹೊತ್ತಿಕೊಂಡಿದ್ದರಿಂದ ಬೈಕ್ ಸವಾರನಿಗೆ ಚೇತರಿಸಿಕೊಳ್ಳಲು ಕಾಲಾವಕಾಶವೇ ಸಿಗಲಿಲ್ಲ. ಘಟನೆಯ ತೀವ್ರತೆಗೆ ಇಡೀ ಬಸ್ ಕ್ಷಣಾರ್ಧದಲ್ಲಿ ಬೆಂಕಿಂ-ಮ ಉಂಡೆಯಾಗಿ ಮಾರ್ಪಟ್ಟಿತ್ತು. ಅದೃಷ್ಟವಶಾತ್, ಬೆಂಕಿ ಬಸ್‌ಗೆ ಆವರಿಸುವ ಮೊದಲೇ ಚಾಲಕನ ಸಮಯಪ್ರಜ್ಞೆ ಹಾಗೂ ಪ್ರಯಾಣಿಕರ ತುರ್ತು ನಿರ್ಗಮನದಿಂದಾಗಿ ಬಸ್‌ನಲ್ಲಿದ್ದ ಎಲ್ಲ ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಸ್ಥಳಕ್ಕೆ ಧಾವಿಸಿದ ಸಿಂದಗಿ ಅಗ್ನಿಶಾಮಕ ದಳದ ಸಿಬ್ಬಂದಿ ಬೆಂಕಿ ನಂದಿಸುವಲ್ಲಿ ಯಶಸ್ವಿಯಾದರು.

ಸಿಂದಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

### ಸೆಲ್ಫಿ ವಿಡಿಯೋ: ಆ್ಯಕ್ಸಿಡೆಂಟ್ ಕೇಸ್‌ಗೆ ಮೇಜರ್ ಟ್ವಿಸ್ಟ್..!

ಆರಂಭದಲ್ಲಿ ಇದನ್ನು ಸಹಜ ಅಪಘಾತ ಎಂದುಕೊಳ್ಳಲಾಗಿತ್ತು. ಆದ್ರೆ ಇನ್‌ಸ್ಟಾಗ್ರಾಂ ಪೋಸ್ಟ್ ನಲ್ಲಿ ಸಾವನ್ನಪ್ಪಿದ ಯುವಕ ಹರಿಬಿಟ್ಟಿದ್ದ ವಿಡಿಯೋ ಇಡೀ ಪ್ರಕರಣಕ್ಕೆ ಮೇಜರ್ ಟ್ವಿಸ್ಟ್ ಕೊಟ್ಟಿದೆ.

ಅಂದಹಾಗೇ ಇದು ಬರೀ ಸಹಜ ಆಕ್ಸಿಡೆಂಟ್ ಅಲ್ಲ, ಪಕ್ಕಾ ಪ್ಲಾನ್ಡ್ ಸೂಸೈಡ್ ಅನ್ನೋದು ಬಯಲಾಗಿದೆ..

ಲವ್ ಫೆಲ್ಯೂವರ್ ನಿಂದಾಗಿ ಯುವಕ ಬಸ್ ಗೆ ಆಕ್ಸಿಡೆಂಟ್ ಮಾಡಿ ಸೂಸೈಡ್ ಮಾಡಿಕೊಂಡಿದ್ದಾನೆ ಎನ್ನಲಾಗುತ್ತಿದೆ. ಇದಕ್ಕೆ ಸಾಕ್ಷಿ ಎಂಬಂತೆ ಗ್ರಾಫಿಕ್ಸ್ ಔಟ್ ಆಗಿದೆ. ಆತನ ಇನ್‌ಸ್ಟಾಗ್ರಾಂ ಐಡಿ ಪರಿಶೀಲನೆ ಮಾಡಿದಾಗ ಆಕ್ಸಿಡೆಂಟ್ ಪ್ರಕರಣಕ್ಕೆ ಭಾರೀ ಟ್ವಿಸ್ಟ್ ಸಿಕ್ಕಿದೆ. ಇದೊಂದು ಸಹಜ ಅಪಘಾತ ಅಲ್ಲ, ಪ್ಲ್ಯಾನ್ಡ್ ಸೂಸೈಡ್ ಅನ್ನೋದು.

ಆರಂಭದಲ್ಲಿ ಇದೊಂದು ಆಕ್ಸಿಡೆಂಟ್ ಅಂತಲೆ ಅಂದುಕೊಳ್ಳಲಾಗಿತ್ತು. ಆದ್ರೆ ಅಭಿಷೇಕ್ ಇನ್‌ಸ್ಟಾಗ್ರಾಂ ಸ್ಟೋ-ರಿಯಲ್ಲಿ ತಾನು ಇಂದು ಸೂಸೈಡ್ ಮಾಡಿಕೊಳ್ತಿರೋದಾಗಿ ಸೆಲ್ಫೀ ವಿಡಿಯೋ ಪೋಸ್ಟ್ ಮಾಡಿದ್ದ. ಅವಳನ್ನ ನನ್ನಿಂದ ದೂರ ಮಾಡಿದ್ದಾರೆ. ಅದಕ್ಕಾಗಿ ಸೂಸೈಡ್ ಮಾಡ್ಕೊತಿರೋದಾಗಿ ಹೇಳಿದ್ದಾನೆ. ತನ್ನ ಆತ್ಮಹತ್ಯೆಗೆ ವಿರೇಶ ನಂದೂರ್, ಆತನ ತಾಯಿ ಚೈತ್ರಾ ನಂದೂರ್, ಕೂಡಲ ಸಂಗಮದಲ್ಲಿರೋ ಅವರ ಸಂಬಂಧಿ ನವಿನ್‌ಕುಮಾರ್ ಪಾಟೀಲ್ ಕಾರಣ ಎಂದಿದ್ದಾನೆ. ಹೀಗೆ ಪೋಸ್ಟ್ ಹಾಕಿದ ಕೆಲ ಸಮಯದಲ್ಲಿ ಸಿಂದಗಿಯ ಕನ್ನೊಳ್ಳಿ ಬಳಿ ಈ ಅಪಘಾತ ನಡೆದಿದೆ.. ಇದೊಂದು ಲವ್ ಫೆಲ್ಯುವರ್ ಸೂಸೈಡ್ ಎನ್ನಲಾಗ್ತಿದೆ..

ಇನ್ನು ಅಭಿಷೇಕ ಲವ್ ಫೇಲ್ಯುವರ್ ಹಿನ್ನೆಲೆ ಆತ್ಮಹತ್ಯೆ ಮಾಡಿಕೊಂಡಿರೋದಾಗಿ ಮೇಲ್ನೋಟಕ್ಕೆ ಕಂಡು ಬರ್ತಿದೆ. ಆದ್ರೆ ಬಸ್‌ಗೆ ಗುದ್ದಿ ಹೀಗೂ ಸೂಸೈಡ್ ಮಾಡಿಕೊಳ್ತಾರಾ ಅನ್ನೋದೆ ಅಚ್ಚರಿ ಮೂಡಿಸಿದೆ.

ಈ ಸಂಬಂಧ ಸಿಂದಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು ತನಿಖೆ ಮುಂದುವರೆದಿದೆ.





# ಭಗವಾನ್ ಮಹಾವೀರ ಜನ್ಮಕಲ್ಯಾಣೋತ್ಸವ ಆಚರಣೆ



■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ಅಹಿಂಸಾ ಪರಮೋ ಧರ್ಮ ಎಂದು ಸಾರಿದ ಭಗವಾನ ಮಹಾವೀರರ ತತ್ವಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಂಡರೆ ಜೀವನ ಪರಿಶುದ್ಧದ ಜೊತೆಗೆ ಸನ್ಮಾರ್ಗದ ಕಡೆಗೆ ನಡೆದಂತಾಗುತ್ತದೆ ಎಂದು ಅರಿಹಂತ ಚಾರಿಟೇಬಲ್ ಟ್ರಸ್ಟಿನ ಅಧ್ಯಕ್ಷ ಮಹಾವೀರ ಸಗರಿ ಹೇಳಿದರು.

ಪಟ್ಟಣದ ಅರಿಹಂತ ಕಾಲೇಜಿನ ಆವರಣದಲ್ಲಿರುವ ಭಗವಾನ ಗೋಮ್ಮಟೇಶ ಬಾಹುಬಲಿ ಸ್ವಾಮಿಯ ಸನ್ನಿದಾನದಲ್ಲಿ 2625 ನೇ ಮಹಾವೀರ ತೀರ್ಥಂಕರರ ಜನ್ಮಕಲ್ಯಾಣೋತ್ಸವ ಕಾರ್ಯಕ್ರಮದಲಲಿ ಅವರು ಮಾತನಾಡಿದರು.

ಮಹಾವೀರ ಭಗವಾನರ ತತ್ವಗಳು ಇಂದಿನ ಮನಕುಲಕ್ಕೆ ಮಹಾವೀರ ಸ್ವಾಮಿಯ ದಿವ್ಯ ಸಂದೇಶಗಳಾದ ಅಹಿಂಸೆ, ಸತ್ಯ, ಆಸ್ತೆಯ, ಬ್ರಹ್ಮಚರ್ಯ ಅಪರಿಗ್ರಹ, ಅನೇಕಾಂತವಾದ, ಶಾಧ್ವಾದ ಮೂಲ ತತ್ವಗಳು ಅಹಿಂಸೆಯಿಂದ ಜೀವಿಗಳ ರಕ್ಷಣೆಯಾಗುತ್ತದೆ. ಮಹಾವೀರ ತತ್ವಗಳು ಲೋಕೋದ್ಧಾರಕ್ಕೆ ಮಾರ್ಗಗಳಾಗಿವೆ ಎಂದರು.

ಪರಸ್ಪರ ಸಹಕಾರದಿಂದ ಪ್ರಗತಿ ಸಾಧ್ಯ. ಇನ್ನೊಬ್ಬರಿಗೆ ಕೇಡನ್ನು ಬಯಸುವದರಿಂದ ಕರ್ಮವು ಬಿಡದೆ ಬೆಂಬತ್ತಿ ಬರುವುದು, ತನಗಿಂತ ಕನಿಷ್ಠರಾದವರ ಬಗ್ಗೆ ಪಶು-ಪಕ್ಷಿ, ಪ್ರಾಣಿ ಸಸ್ಯ ಸಂಕುಲನದ ಬಗ್ಗೆ ಜೀವ ದಯೇ ಇರಲಿ, ಅನ್ನದಾನ, ಅಭಯದಾನ ಶಾಸ್ತ್ರದಾನ, ವಿದ್ಯಾದಾನ ಶ್ರೇಷ್ಠದಾನಗಳು ಎಂದು ಭಗವಾನ್ ಮಹಾವೀರರು ಸಾರಿದ ಮಹಾನ್ ಸನ್ಯಾಸಿ ಎಂದರು.

ಕಾರ್ಯಕ್ರಮದಲ್ಲಿ ಬಸವರಾಜ ಬಡಿಗೇರ ವಕೀಲರು ಹಾಗೂ ಉಪನ್ಯಾಸಕ ರಾಜನಾರಾಯಣ ನಲವಡೆ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಭಗವಾನ ಮಹಾವೀರರು ಭೋದಿಸಿದ ಅಹಿಂಸಾ ಪರಮೋ ಧರ್ಮ ಎಂಬ ತತ್ವವನ್ನು ಅಳವಡಿಸಿಕೊಂಡರೆ ಜೀವನ ಸಾರ್ಥಕವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಅನಿಲಕುಮಾರ ಸಗರಿ, ಮಹಾವೀರ ಮಂಕಣಿ, ಸುನೀಲ ಸಗರಿ, ವಿಪುಲ್ ಸಗರಿ, ಅಕ್ಷತಾ ಸಗರಿ, ನಮ್ರತಾ ಸಗರಿ, ಜಿ.ಡಿ.ಬಡಿಗೇರ, ಹೆಚ್.ಎಸ್.ಗೌಡರ್, ಸಮೀರ್ ಬಿ, ರೋಹಿನಿ ನಾಯ್ಕೋಡಿ ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಜೆಡಿಎಸ್ ಗೆಲ್ಲಲು ಕಾಂಗ್ರೆಸ್ ಬಿಡುವುದಿಲ್ಲ : ಬಿ.ವಿ.ಬಸವರಾಜು

■ ಉದಯರಶ್ಮಿ ದಿನಪತ್ರಿಕೆ



ಹೆಚ್ ಡಿ ಕೋಟೆ: ಮೊನ್ನೆ ನಡೆದ ಜನರೊಂದಿಗೆ ಜನತಾದಳ ಸಮಾವೇಶಕ್ಕೆ ಮಾಜಿ ಶಾಸಕ ಚಿಕ್ಕಣ್ಣ ಅವರನ್ನು ಕರೆತಂದಿದ್ದರೆ ಹೆಚ್ ಡಿ ಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಓಆಂ ಅಭ್ಯರ್ಥಿ ಗೆಲ್ಲುವ ಒಂದು ಅವಕಾಶವಿತ್ತು. ಆದ-'ರೆ ಆ ಕೆಲಸವನ್ನು ನಿಖಿಲ್ ಕುಮಾರಸ್ವಾಮಿ ಮಾಡಲಿಲ್ಲ. ಜೆಡಿಎಸ್ ಪಕ್ಷದಿಂದ ದೂರ ಇರುವ ಮಾಜಿ ಶಾಸಕ ಚಿಕ್ಕಣ್ಣ ಸುಮ್ಮನೆ ಕೈಕಟ್ಟಿ ಕುಳಿತಿಲ್ಲ. ಅಂದೇ ಪಂಚೆಯನ್ನು ಮೇಲಕ್ಕೆ ಕಟ್ಟಿ, ಟಿಕೆಟ್ ತರುವುದಾಗಿ ತೊಡೆ ತಟ್ಟಿದ್ದರು. ಆ ಕೆಲಸವನ್ನು ಮುಂಬರುವ ವಿಧಾನಸಭೆ ಚುನಾವಣೆಗೂ ಮಾಡುತ್ತಾರೆ, ಓಆಂ ಮೈತ್ರಿಕೂಟದಲ್ಲಿ ಟಿಕೆಟ್ ತರುತ್ತಾರೆ. ಹೀಗಾಗಿ ಇಬ್ಬರ ಜಗಳದಲ್ಲಿ ಮೂರನೆಯವರಿಗೆ ಲಾಭ ಎನ್ನುವ ಗಾದೆ ಮಾತಿನಂತೆ 2028 ವಿಧಾನಸಭಾ ಚುನಾವಣೆಗೂ ಕಾಂಗ್ರೆಸ್ ಗೆ ಲಾಭವಾಗಲಿದ್ದು, ಶಾಸಕ ಅನಿಲ್ ಚಿಕ್ಕಮಾದು ಮತ್ತೊಮ್ಮೆ ಶಾಸಕರಾಗಿ ಆಯ್ಕೆಯಾಗುತ್ತಾರೆ ಎಂದು ಕಾಂಗ್ರೆಸ್ ಮುಖಂಡ, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಬಿ.ವಿ. ಬಸವರಾಜು ಭವಿಷ್ಯ ನುಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಾತನಾಡಿದ ಬಿ.ವಿ. ಬಸವರಾಜು. ಜೆಡಿಎಸ್ ಯುವ ಘಟಕದ ಅಧ್ಯಕ್ಷ ನಿಖಿಲ್ ಕುಮಾರಸ್ವಾಮಿ ಅವರು ಪಕ್ಷ ಸಂಘಟಿಸಲು ರಾಜ್ಯಾದ್ಯಂತ ಹೋರಾಟ ಮಾಡುತ್ತಿದ್ದಾರೆ. ಆದರೆ ಹೆಚ್ ಡಿ ಕೋಟೆಯಲ್ಲಿ ಕಾರ್ಯಕ್ರಮ ಮಾಡುವಾಗ ಎಡವಿದ್ದಾರೆ.

## ತಹಸೀಲ್ದಾರ್ ಪ್ರಾಮಾಣಿಕ, ಸಬ್ ಇನ್ಸೆಕ್ಟರ್ ದಕ್ಷ ಅಧಿಕಾರಿ

**ಹೆಚ್ ಡಿ ಕೋಟೆ ತಾಲೂಕು ಕಚೇರಿಯಲ್ಲಿ ಸಾಗುವಳಿ ಪತ್ರ ಪಡೆಯಲು ಒಂದು ಎಕರೆಗೆ 50 ಸಾವಿರದಿಂದ ಒಂದು ಲಕ್ಷ ಫಿಕ್ಸ್ ಮಾಡಲಾಗಿದೆ ಎಂಬ ಆರೋಪವನ್ನು ಬಿ.ವಿ ಬಸವರಾಜು ತಳ್ಳಿಹಾಕಿದ್ದಾರೆ.**

**ಶಾಸಕ ಅನಿಲ್ ಚಿಕ್ಕಮಾದು ಸೇರಿದಂತೆ ದರ್ಖಾಸ್ ಸಮಿತಿ ಸದಸ್ಯರು, ಒಬ್ಬರ ಬಳಿಯೂ ಒಂದೇ ಒಂದು ರೂಪಾಯಿ ಲಂಚ ತೆಗೆದುಕೊಂಡಿಲ್ಲ. ಪ್ರಾಮಾಣಿಕವಾಗಿ ಕೆಲಸ ಮಾಡುತ್ತಿದ್ದಾರೆ. ಈ ಹಿಂದೆ ಇದ್ದ ಮಂಜುನಾಥ್ ಹಾದಿಯಲ್ಲಿ ತಹಸೀಲ್ದಾರ್ ಶ್ರೀನಿವಾಸ್ ಸಾಗುತ್ತಿದ್ದಾರೆ. ಯಾರ ಬಳಿಯೂ ಲಂಚ ಸ್ವೀಕಾರ ಮಾಡದೇ ಪ್ರಾಮಾಣಿಕವಾಗಿ ಸಾರ್ವಜನಿಕ ಕೆಲಸ ಮಾಡುತ್ತಿದ್ದಾರೆ. ಅದೇ ರೀತಿ ಸಬ್ ಇನ್ಸೆಕ್ಟರ್ ಗಂಗಾಧರ್ ಕೂಡ ಒಬ್ಬ ದಕ್ಷ ಅಧಿಕಾರಿಯಾಗಿದ್ದು, ತಮ್ಮ ಜವಾಬ್ದಾರಿಯನ್ನು ಸಮರ್ಥವಾಗಿ ನಿಭಾಯಿಸುತ್ತಿದ್ದಾರೆ ಎಂದು ಹೇಳಿದರು.**

## ಜಾಗಕ್ಕಾಗಿ ಅರ್ಜಿಯನ್ನೇ ಹಾಕಿರಲಿಲ್ಲ

**ಜನರೊಂದಿಗೆ ಜನತಾದಳ ಸಮಾವೇಶ ಕಾರ್ಯಕ್ರಮಕ್ಕೆ ಜಾಗ ಕೊಡದಂತೆ ಶಾಸಕ ಅನಿಲ್ ಚಿಕ್ಕಮಾದು ಅವರು ಪುರಸಭೆ ಮುಖ್ಯಾಧಿಕಾರಿ ಸುರೇಶ್ ಮೇಲೆ ಒತ್ತಡ ಹಾಕಿದ್ದರು ಎಂಬುದು ಶುದ್ಧ ಸುಳ್ಳು, ಜಾಗ ಕೊಡಿ ಎಂದು ಕೆ.ಎಂ.ಕೃಷ್ಣನಾಯಕ ಪುರಸಭೆಗೆ ಅರ್ಜಿಯನ್ನೇ ಹಾಕಿರಲಿಲ್ಲ. ಕಾರ್ಯಕ್ರಮ ಆಯೋಜಕರು ಅರ್ಜಿಯನ್ನೇ ಹಾಕದಿರುವಾಗ ಹೇಗೆ ತಾನೇ ಜಾಗ ಕೊಡಲು ಸಾಧ್ಯ ಎಂದು ಬಿ.ವಿ ಬಸವರಾಜು ಪ್ರಶ್ನಿಸಿದರು.**

**"ರಸ್ತೆ ದುರಸ್ತಿ ಸೇರಿದಂತೆ ಅನೇಕ ಅಭಿವೃದ್ಧಿ ಕೆಲಸಗಳಿಗೆ ಸಾವಿರಾರು ಕೋಟಿ ರೂಪಾಯಿ ಅನುದಾನ ತಂದಿದ್ದಾರೆ. ಮೈಸೂರು ಟು ಬಾವಲಿ ಜೋಡಿ ರಸ್ತೆ ನಿರ್ಮಾಣಕ್ಕೆ ಬಜೆಟ್ ನಲ್ಲಿ ಅನುದಾನ ಮೀಸಲಿರಿಸಲಾಗಿದೆ. ಬಿದರಹಳ್ಳಿಯಿಂದ ಎನ್ ಬೇಗೂರು ರಸ್ತೆ ಕಾಮಗಾರಿ ನಡೆಯುತ್ತಿದೆ. ಮುಳ್ಳೂರು, ಬರಗಿ ರಸ್ತೆ ದುರಸ್ತಿ ನಡೀತಿದೆ. ಇಷ್ಟೆಲ್ಲ ಕೆಲಸ ಮಾಡುವ ಅನಿಲ್ ಚಿಕ್ಕಮಾದು ಅವರನ್ನು ಗುದ್ದಲಿ ಪೂಜೆಗಷ್ಟೇ ಸೀಮಿತವಾಗಿದ್ದಾರೆ ಎಂದು ಆರೋಪ ಮಾಡುವುದು ಸರಿಯಲ್ಲ."**

**■ ಬಿ.ವಿ. ಬಸವರಾಜು**
**ಕಾಂಗ್ರೆಸ್ ಮುಖಂಡರು**

ಜನರೊಂದಿಗೆ ಜನತಾದಳ ಸಮಾವೇಶ ಮಾಡುವಾಗ ನಿಖಿಲ್ ಕುಮಾರಸ್ವಾಮಿ, ಚಿಕ್ಕಣ್ಣ ಅವರ ಮನೆಗೆ ಹೋಗಿ, ಅವರ ಮನವೊಲಿಸಿ ಕಾರ್ಯಕ್ರಮಕ್ಕೆ ಕರೆತರಬೇಕಾಗಿತ್ತು. ಸದ್ಯ ಟಿಕೆಟ್ ಗೊಂದಲವಿದೆ. ಅಲ್ಲಿಯವರೆಗೆ ಇಬ್ಬರೂ ಕ್ಷೇತ್ರದಲ್ಲಿ ಪಕ್ಷ ಸಂಘಟನೆ ಮಾಡಿ ಎಂದು ವೇದಿಕೆ ಮೇಲೆ ಹೇಳಬೇಕಾಗಿತ್ತು. ಆದರೆ ಆ ಕೆಲಸವನ್ನು ನಿಖಿಲ್ ಕುಮಾರಸ್ವಾಮಿ ಮಾಡಿಲ್ಲ. ಇದರಿಂದ ಕೋಪಗೊಂಡಿರುವ ಚಿಕ್ಕಣ್ಣ ಸುಮ್ಮನೇ ಕೂರಲ್ಲ, ಚುನಾವಣೆ ವೇಳೆಗೆ ಟಿಕೆಟ್ ತಂದೆ ತರುತ್ತಾರೆ. ಇದು ಕಾಂಗ್ರೆಸ್ ಗೆಲುವಿಗೆ ಸಹಕಾ-ರಿಯಾಗಲಿದೆ ಎಂದರು.

ಶಾಸಕ ಅನಿಲ್ ಚಿಕ್ಕಮಾದು ವಿರುದ್ಧ ಜೆಡಿಎಸ್ ಮುಖಂಡ ಕೆ.ಎಂ. ಕೃಷ್ಣನಾಯಕ ಇಲ್ಲಸಲ್ಲದ ಆರೋಪ ಮಾಡಿದ್ದಾರೆ. ಮೈಸೂರು ಜಿಲ್ಲೆಯಲ್ಲಿ ಹೆಚ್ ಡಿ ಕೋಟೆ ತಾಲೂಕು ಶಿಕ್ಷಣದಲ್ಲಿ ಹತ್ತನೇ ಸ್ಥಾನದಲ್ಲಿದೆ ಎಂದು ಹೇಳಿದ್ದಾರೆ. ಇದು ಹಸಿ ಸುಳ್ಳು. ಮೈಸೂರು ಜಿಲ್ಲೆಯಲ್ಲಿ ಇರುವುದೇ 9 ಸ್ಥಾನ ಮಾತ್ರ. ಮಾಹಿತಿ ತಿಳಿದುಕೊಳ್ಳದೆ ಕೆ.ಎಂ. ಕೃಷ್ಣನಾಯಕ ಆಧಾರರಹಿತ ಆರೋಪ ಮಾಡಿದ್ದಾರೆ. ಡಿಡಿಪಿಐ ಅವರನ್ನ ಕೇಳಿದ್ದಾಗ ನಮ್ಮ ತಾಲೂಕು 3ನೇ ಸ್ಥಾನದಲ್ಲಿದೆ ಎಂದು ಹೇಳಿದ್ದಾರೆ. ಶಾಸಕ ಅನಿಲ್ ಚಿಕ್ಕಮಾದು ಅವರು ಶಿಕ್ಷಣ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ಕೊಟ್ಟಿದ್ದಾರೆ. ಸಿಬ್ಬಂದಿ ಕೊರತೆ ಇರುವ ಸರ್ಕಾರಿ ಶಾಲೆಗಳಿಗೆ ಶಿಕ್ಷಕರ ನೇಮಕ ಮಾಡಿದ್ದಾರೆ. ಮೂಲಭೂತ ಸೌಕರ್ಯ ಕಲ್ಪಿಸಿಕೊಟ್ಟಿದ್ದಾರೆ ಎಂದು ಬಿ.ವಿ.ಬಸವರಾಜು ಹೇಳಿದರು.

# ಪ್ರಾಣಿ-ಪಕ್ಷಿಗಳ ಸಂಕುಲದ ರಕ್ಷಣೆಗೆ ಅರ್ಧಗಂಟೆ ಮೀಸಲಿಡಿ : ಕಾಪಸೆ



■ ಉದಯರಶ್ಮಿ ದಿನಪತ್ರಿಕೆ

**ಚಡಚಣ:** ಹಿಂದೆ ನಮ್ಮ ತಂದೆ/ತಾಯಿ, ಅಜ್ಜ / ಅಜ್ಜಿಯರ ಸಮಯದಲ್ಲಿ ಪ್ರಾಣಿ ಪಕ್ಷಿಗಳ ಸಂತಾನ ಹೆಚ್ಚಾಗಿ ಮನೆಗಳಲ್ಲಿ ಕಾಣುತಿದ್ದೆವು, ಆದರೆ ಇವಾಗ ಜಗತ್ತಿನಲ್ಲಿ ಮೊಬೈಲ್, ಸೆಟಲೈಟ್, ವಾಹನಗಳ ಮಾಲಿನ್ಯಕ್ಕೆ ಪಕ್ಷಿಗಳ ಸಂತಾನ ಕ್ಷಿಣಿಸುತ್ತಿದೆ, ಇದಕ್ಕೆಲ್ಲ ನಾವು ಮನುಜರು ಮನಸ್ಸು ಮಾಡಿದರೆ ಪಕ್ಷಿಗಳ ಸಂತಾನ ಉಳಿಸಲು ಸಾಧ್ಯ ಎಂದು ವಿಜಯಪುರ ಜಿಲ್ಲಾ ಬಿಜೆಪಿ ಯುವಮೋರ್ಚಾ ಅಧ್ಯಕ್ಷ ರಾಘವೇಂದ್ರ ಕಾಪಸೆ ಹೇಳಿದರು.

ಬೇಸಿಗೆ ಸಮಯದಲ್ಲಿ ಚಡಚಣ ತಾಲೂಕಿನ ಹತ್ತಳ್ಳಿ ಗ್ರಾಮದ ಕೆರೆಯಲ್ಲಿ ಸಾವಿರಾರು ಪಕ್ಷಿಗಳು ನಾಶವಾದ ವಿಷಯ ಕಂಡು ಝಳಕಿ ಗ್ರಾಮದಲ್ಲಿ ವಿಜಯಪುರ ಜಿಲ್ಲಾ ಬಿಜೆಪಿ ಯುವಮೋರ್ಚಾ ಅಧ್ಯಕ್ಷರು ರಾಘವೇಂದ್ರ ಕಾಪಸೆ ಹಾಗೂ ಗೆಳೆಯರ ಬಳಗದ ಸಹಯೋಗದಲ್ಲಿ ಪಕ್ಷಿಗಳಿಗೆ ನಿರುಣಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಹಿಂದೆ ಸಲೀಮ್ ಅಲಿ ಅಂತಹ ಪ್ರಾಣಿ, ಪಕ್ಷಿಗಳ ಪ್ರಿಯರು ಇತಿಹಾಸದಲ್ಲೇ ದಾಖಲೆಯಾಗಿದ್ದನ್ನು ಕಂಡಿದ್ದೇವೆ, ನಾವುಗಳು ಪಕ್ಷಿಗಳಿಗೆ ದಿನದ ಒಂದು ಅರ್ಧ ಗಂಟೆ ಮಾತ್ರ ಕಾರ್ಯಗತರಾಗೋಣ ಎಂದರು.

ಈ ಸಂದರ್ಭದಲ್ಲಿ ಕರ್ನಾಟಕ ರಕ್ಷಣಾ ವೇದಿಕೆ ಇಂಡಿ ತಾಲೂಕು ಉಪಾಧ್ಯಕ್ಷ ಪ್ರಕಾಶ ಬಿರಾದಾರ, ಝಳಕಿ ವಲಯ ಅಧ್ಯಕ್ಷ ರವಿಕುಮಾರ ಹೂಗಾರ, ಶಶಿಧರ ಪಾಟೀಲ,ಪಿಂಟುದಾದಾ ಹಾಡ್ಸಂಗೆ, ಮಾಜಿ ಗ್ರಾ. ಪಂ. ಅಧ್ಯಕ್ಷ ಶ್ರೀಶೈಲ ಬನಸೋಡೆ, ವಿಠಲ ಕಾಗರ, ದಯಾನಂದ ಶಿವಣಗಿ, ಬಾಲಕೃಷ್ಣ ಭೋಸಲೆ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಬಾಲೇಶ್ವರ ಜಾತ್ರೆ: ಭಕ್ತಸಾಗರದಲ್ಲಿ ತೇಲಿದ ಭವ್ಯ ಪಲ್ಲಕ್ಕಿ ಉತ್ಸವ!

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ತಾಲೂಕಿನ ಹರಿಂದ್ರಾಳ ಗ್ರಾಮದ ಆರಾಧ್ಯ ದೈವ ಶ್ರೀ ಬಾಲೇಶ್ವರ ದೇವರ ಜಾತ್ರಾ ಮಹೋತ್ಸವವು ರವಿವಾರ ಶ್ರದ್ಧಾ ಭಕ್ತಿಯೊಂದಿಗೆ ಅದ್ದೂರಿಯಾಗಿ ನೆರವೇರಿತು.

ಗ್ರಾಮದಲ್ಲಿ ಹಬ್ಬದ ವಾತಾವರಣ ಮನೆಮಾಡಿದ್ದು, ಸಾವಿರಾರು ಭಕ್ತಾದಿಗಳು ದೈವದರ್ಶನ ಪಡೆದು ಪುನೀತರಾದರು.

ಜಾತ್ರೆಯ ಅಂಗವಾಗಿ ಬ್ರಾಹ್ಮೀ ಮುಹೂರ್ತದಲ್ಲಿ ಶ್ರೀ ಬಾಲೇಶ್ವರ ದೇವರ ಮೂರ್ತಿಗೆ ವಿಶೇಷ ಪಂಚಾಮೃತ ಅಭಿಷೇಕ, ನೈವೇದ್ಯ ಹಾಗೂ ಮಹಾಪೂಜೆಗಳನ್ನು ನೆರವೇರಿಸಲಾಯಿತು. ನಂತರ ಗ್ರಾಮದ ಪುಣ್ಯ ಗಂಗಸ್ಥಳದಲ್ಲಿ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ, ಅಲ್ಲಿಂದ ಭವ್ಯ ಪಲ್ಲಕ್ಕಿ ಉತ್ಸವಕ್ಕೆ ಚಾಲನೆ ನೀಡಲಾಯಿತು.

ವೈವಿಧ್ಯಮಯ ಕಲಾತಂಡಗಳ ಮೆರವಣಿಗೆ

ಗಂಗಸ್ಥಳದಿಂದ ದೇವಸ್ಥಾನದವರೆಗೆ ನಡೆದ ಪಲ್ಲಕ್ಕಿ ಮೆರವಣಿಗೆಯು ನೋಡುಗರ ಕಣ್ಣು ಸೆಳೆಯಿತು. ನೂರಾರು ಡೊಳ್ಳುಗಳ ಬಡಿತದ ನಿನಾದ ಅಂಬರ ಚುಂಬಿಸಿತ್ತು. ಕರಡಿ ಮಜಲು, ಸಕಲ ವಾದ್ಯ ವೈಭವಗಳು ಮೆರವಣಿಗೆಗೆ ಮೆರುಗು ನೀಡಿದವು. ಜೋಗತಿ ನೃತ್ಯ ಭಕ್ತರ ಗಮನ ಸೆಳೆಯಿತು. ನೂರಾರು ಕಳಶಗಳೊಂದಿಗೆ ಸಾಗಿದ ಮೆರವಣಿಗೆಯಲ್ಲಿ ಮಹಿಳೆಯರು ಆರತಿ ಬೆಳಗಿ ಭಕ್ತಿ ಸಮರ್ಪಿಸಿದರು.

**ಭಕ್ತರ ಹರಕೆ ಮತ್ತು ದೀರ್ಘದಂಡ ನಮಸ್ಕಾರ**

ದೇವರಿಗೆ ಹರಕೆ ಹೊತ್ತ ನೂರಾರು ಮಹಿಳೆಯರು, ಪುರುಷರು ಮತ್ತು ಮಕ್ಕಳು ಗಂಗಸ್ಥಳದಿಂದ ದೇವಸ್ಥಾನದವರೆಗೆ ದೀರ್ಘ ದಂಡ ನಮಸ್ಕಾರ ಹಾಕುವ ಮೂಲಕ ತಮ್ಮ ಶ್ರದ್ಧಾಭಕ್ತಿಯನ್ನು ಮೆರೆದರು.

## ಸಮೃದ್ಧಿಯ ದೈವ ನುಡಿ


**ಗ್ರಾಮದ ಭವಿಷ್ಯದ ಬಗ್ಗೆ ನುಡಿದ ಪೂಜಾರಿಗಳು, "ಬರುವ ವರ್ಷದಲ್ಲಿ ಉತ್ತಮ ಮಳೆ-ಬೆಳೆಯಾಗಿ ಗ್ರಾಮವು ಸಕಲ ಸಂಪತ್ತು ಮತ್ತು ಸಮೃದ್ಧಿಯಿಂದ ಬೆಳೆಯಲಿದೆ" ಎಂದು ದೈವವಾಣಿಯನ್ನು ನುಡಿದರು.**

ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಸಂಖ್ಯೆಯಲ್ಲಿ ಭಕ್ತ ಸಾಗರವೇ ಹರಿದು ಬಂದಿತ್ತು.

ಜಾತ್ರಾ ಮಹೋತ್ಸವದಲ್ಲಿ ಗ್ರಾಮದ ಪ್ರಮುಖರಾದ ಪರಶು ನಾಗರಬೆಟ್ಟ, ಲಕ್ಷಣ ಒಳಕಲದಿನ್ನಿ, ಯಮನಪ್ಪ ಬಿರಾದಾರ, ನಾಗೇಶ ಬಿರಾದಾರ, ಯಲ್ಲಪ್ಪ ಚಲವಾದಿ, ರಮೇಶ ಬಿರಾದಾರ, ಹಣಮಗೌಡ ಪಾಟೀಲ, ಭೈಲಪ್ಪ ನಾಗರಬೆಟ್ಟ, ಬಸಪ್ಪ ತುರಡಗಿ, ಬಸನಗೌಡ ಪಾಟೀಲ, ಶಿವಪ್ಪ ನಾಗರಬೆಟ್ಟ, ಹಣಮಂತ ಬಿರಾದಾರ, ಶರಣಗೌಡ ಪಾಟೀಲ, ಸಂತೋಷ ಬಿರಾದಾರ, ಬಸನಗೌಡ ಪಾಟೀಲ ಸೇರಿದಂತೆ ಗ್ರಾಮದ ಹಿರಿಯರು, ಮಹಿಳೆಯರು, ಯುವಕರು ಹಾಗೂ ಸರ್ವ ಸದ್ಭಕ್ತರು ಪಾಲ್ಗೊಂಡು ಸೇರಿದಂತೆ ಸುತ್ತಮುತ್ತಲಿನ ಭಕ್ತರು ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಂಡು ಭಕ್ತಿ ಸಮರ್ಪಿಸಿದರು.

# 'ಕೈ' ಅಧ್ಯಕ್ಷೆ ಸೌಮ್ಯ ಮಂಜುನಾಥ್ ಗೆ ರಾಜ್ಯ ಪ್ರಶಸ್ತಿ ಪ್ರದಾನ

■ ಉದಯರಶ್ಮಿ ದಿನಪತ್ರಿಕೆ



ಹೆಚ್ ಡಿ ಕೋಟೆ: ಅಂತರರಾಷ್ಟೀಯ ಮಹಿಳಾ ದಿನಾಚರಣೆ ಪ್ರಯುಕ್ತ ಬಿ.ಎನ್. ಎನ್.ಡಿ.ಪಿ. ರಾಜ್ಯ ಮಹಿಳಾ ಸಂಘಟನೆ ಮತ್ತು ಉದ್ದೇಶಿತ ಹಾಗೂ ಕನಾಟಕ ರಾಜ್ಯ ಶಿವಶರಣೆ ಅಕ್ಕಮ್ಮ ಮಹಿಳಾ ಕೋ-ಅಪರೇಟಿವ್ ಸೊಸೈಟಿ (ನಿ) ಕೊಡ ಮಾಡುವ ಶಿವಶರಣೆ ಅಕ್ಕಮ್ಮ ರಾಜ್ಯ ಪ್ರಶಸ್ತಿಗೆ ಹೆಚ್ ಡಿ ಕೋಟೆ ತಾಲೂಕು ಮಹಿಳಾ ಘಟಕದ ಕಾಂಗ್ರೆಸ್ ಅಧ್ಯಕ್ಷರಾದ ಸೌಮ್ಯ ಮಂಜುನಾಥ್ ಭಾಜನರಾಗಿದ್ದಾರೆ. ಬೆಂಗಳೂ-ರಿನಲ್ಲಿ ನಡೆದ ಕಾರ್ಯಕ್ರಮದಲ್ಲಿ ಸೌಮ್ಯ ಮಂಜುನಾಥ್ ಅವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಈಡಿಗ, ಬಿಲ್ಲವ, ನಾಮಧಾರಿ, ದೀವರು, ದೇಸಿ ಭಂಡಾರಿ, ತೀಯಾ, ನಾಡರ್ ಸಮಾಜದ 26 ಒಳಪಂಗಡಗಳ ಸಾಧಕರಿಗೆ ಹಾಗೂ ಮಹಿಳಾ ಸಂಘಗಳ ಜಿಲ್ಲಾ ಹಾಗೂ ತಾಲೂಕು ಅಧ್ಯಕ್ಷರಿಗೆ ಅವರ ಸಮಾಜ ಸೇವೆ, ಸಾಧನೆ ಮತ್ತು ನಾಯಕತ್ವವನ್ನು ಗುರುತಿಸಿ ಶಿವಶರಣೆ ಅಕ್ಕಮ್ಮ ರಾಜ್ಯ ಪ್ರಶಸ್ತಿ ನೀಡಿ ಗೌರಿಸಲಾಗುತ್ತದೆ.

# ರಾಜ್ಯ ಕರಾಟೆ ಶಿಕ್ಷಕರ ಸಂಘದ ರಾಜ್ಯ ವಕ್ತಾರರಾಗಿ ಶಾರದಳ್ಳಿ ಆಯೆ

■ ಉದಯರಶ್ಮಿ ದಿನಪತ್ರಿಕೆ




ಮುದ್ದೇಬಿಹಾಳ: ರಾಜ್ಯ ಕರಾಟೆ ಶಿಕ್ಷಕರ ಸಂಘದ ರಾಜ್ಯ ವಕ್ತಾರ ಹಾಗೂ ಖಜಾಂಚಿಯಾಗಿ ತಾಲೂಕಿನ ಕರಾಟೆ ಶಿಕ್ಷಕ ಶಿವಕುಮಾರ ಶಾರದಳ್ಳಿ ರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ.

ಸರ್ಕಾರಗಳ ಗಮನ ಸೆಳೆಯುವ ಮೂಲಕ ರಾಜ್ಯದಲ್ಲಿ ಕರಾಟೆ ಕ್ರೀಡೆಯನ್ನು, ರಾಜ್ಯ ವ್ಯಾಪ್ತಿಯಲ್ಲಿ ಸರ್ಕಾರಿ ಶಾಲೆಗಳು ಮತ್ತು ವಸತಿ ಶಾಲೆಗಳಿಗೂ ಕರಾಟೆ ತರಬೇತಿಯನ್ನು ಕೊಡಿಸುವಲ್ಲಿ ಪ್ರಮುಖರಾಗಿ ಹೋರಾಟವನ್ನು ಹಮ್ಮಿಕೊಂಡು ಯಶಸ್ವಿಯಾಗಿದ್ದ ಹಿನ್ನೆಲೆ ಇವರನ್ನು ಸತತವಾಗಿ ನಾಲ್ಕನೇ ಬಾರಿಗೆ ಸಂಘದ ಸರ್ವ ಸದಸ್ಯರು ಈ ಜವಾಬ್ದಾರಿಯನ್ನು ನೀಡಿದ್ದಾರೆ.

ಕ್ರೀಡೆಗಳಲ್ಲಿ ಮಹತ್ತರ ಜ್ಞಾನ ಮತ್ತು ಅನುಭವನ್ನು ಹೊಂದಿದ್ದ ಶಾರದಳ್ಳಿಯವರು ಕರಾಟೆ ಕ್ರೀಡೆ ಮಾತ್ರವಲ್ಲದೇ ತಾಲೂಕಿನಲ್ಲಿ ಸ್ಕೇಟಿಂಗ್ ತರಬೇತಿಯನ್ನು ವಿದ್ಯಾರ್ಥಿಗಳಿಗೆ ನೀಡುವಲ್ಲಿ ಯಶಸ್ವಿಯಾಗಿ ತಾಲೂಕಿನ ಹೆಸರು ರಾಜ್ಯದಲ್ಲೆಡೆ ಪಸರಿಸಿ ಕೀರ್ತಿ ತಂದ ಇವರಿಗೆ ರಾಜ್ಯ ಕರಾಟೆ ಶಿಕ್ಷಕರ ಸಂಘ ಹೆಚ್ಚಿನ ಜವಾಬ್ದಾ-ರಿಯನ್ನು ನೀಡಿದ್ದು ಹೆಮ್ಮೆಯ ವಿಷಯ ಎಂದು ತಾಲೂಕಿನ ಬಿಎಎಸ್ ಇಂಟರ್‌ನ್ಯಾಶನಲ್ ಸ್ಕೂಲ್ ಅಧ್ಯಕ್ಷ ಮಹಾಂತಗೌಡ ಬಿರಾದಾರ ಹಾಗೂ ಶಾಲಾ ಆಡಳಿತ ಮಂಡಳಿಯವರು ಶಾರದಳ್ಳಿಯವರಿಗೆ ಅಭಿನಂದಿಸಿದ್ದಾರೆ.

# ರಾಷ್ಟ್ರದ ಹಿತದೃಷ್ಟಿಯಿಂದ ಬಿಜೆಪಿ ಬೆಂಬಲಿಸಿ :ನಾರಯಣಸ್ವಾಮಿ

■ ಉದಯರಶ್ಮಿ ದಿನಪತ್ರಿಕೆ




**ಕೊಲ್ಹಾರ:** ದಲಿತ ಸಮುದಾಯವನ್ನು ಮತ್ತು ಅಲ್ಪ ಸಂಖ್ಯಾತರನ್ನು ಕಾಂಗ್ರೆಸ್ ಪಕ್ಷ ವೋಟ್ ಬ್ಯಾಂಕ್ ಆಗಿ ಬಳಸಿಕೊಂಡಿರುವದನ್ನು ಬಿಟ್ಟರೆ ಆ ಸಮುದಾಯದ ಯಾರನ್ನೂ ರಾಜಕೀಯ ಕ್ಷೇತ್ರದಲ್ಲಿ ಉನ್ನತ ಸ್ಥಾನವನ್ನು ಕಲ್ಪಿಸಿಕೊಟ್ಟ ಉದಾಹರಣೆಗಳೇ ಇಲ್ಲ ಆದ್ದರಿಂದ ರಾಜ್ಯದಲ್ಲಿ ವಾಸಿಸುವ ಎರಡೂ ಸಮುದಾಯದ ನಾಗ-ರಿಕರು ಎಚ್ಚೆತ್ತುಕೊಂಡು ರಾಷ್ಟದ ಹಿತದೃಷ್ಟಿಯಿಂದ ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸಬೇಕು ಎಂದು ವಿಧಾನ ಪರಿಷತನ ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಹೇಳಿದರು.

ಪಟ್ಟಣದಲ್ಲಿ ನಡೆದ ಬಿಜೆಪಿ ಕಾರ್ಯಕರ್ತರ ಪ್ರ.ಶಿಕ್ಷಣ ಅಭಿಯಾಣ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಗಮಿಸಿದಾಗ ಅವಳಿ ಜಿಲ್ಲಾ ಕೆಎಂಎಫ್ ಮಾಜಿ ನಿರ್ದೇಶಕ ಕಾಂಗ್ರೆಸ್ ಪಕ್ಷದ ಪ್ರಭಾವಿ ಮುಖಂಡರಾಗಿದ್ದ ಗುರು ಚಲವಾದಿ ಅವರನ್ನು ಮತ್ತು ನೂರಾರು ಕಾಂಗ್ರೆಸ್ ಕಾರ್ಯಕರ್ತರು ಕಾಂಗ್ರೆಸ್ ಪಕ್ಷವನ್ನು ತೊರೆದು ಬಿಜೆಪಿ ಪಕ್ಷಕ್ಕೆ ಸೇರ್ಪಡೆಯಾಗಲು ಬಂದಾಗ ಸ್ವಾಗತಿಸಿ ಮಾತನಾಡಿದರು.

ಬಿಜೆಪಿ ಪಕ್ಷವು ಅಧಿಕಾರಕ್ಕೆ ಬಂದರೆ ಸಂವಿಧಾನವನ್ನು ಬದಲಾವಣೆ ಮಾಡುತ್ತಾರೆ ದಲಿತ ಮತ್ತು ಮುಸ್ಲೀಂ ಸಮುದಾಯವನ್ನು ರಾಜಕೀಯವಾಗಿ ಬಳಸುವದಿಲ್ಲ ಆರ್ಥಿಕವಾಗಿ ಸಬಲರನ್ನಾಗಿ ಮಾಡುವದಿಲ್ಲ ಹಲವಾರು ವಿಷಯಗಳ ಕುರಿತು ಕಪೋಲ ಕಲ್ಪಿತ ವಿಷಬೀಜವನ್ನೇ ಈ ಸಮುದಾಯದ ನಾಗರಿಕರಲ್ಲಿ ಬಿತ್ತುತ್ತಾ ಬಂದಿರುವ ಕಾಂಗ್ರೆಸ್ ಪಕ್ಷವು ರಾಜ್ಯ ಮತ್ತು ರಾಷ್ಟ್ರ ಮಟ್ಟದಲ್ಲಿ ವೆಂಟಿಲೇಟ-ರ್ ಮೂಲಕ ಉಸಿರಾಟ ಮಾಡುತ್ತಿದ್ದು ಆ ವೆಂಟಿಲೇಟ-ರ್ ಎಂದರೆ ದಲಿತ ಮತ್ತು ಮುಸ್ಲೀಂ ಸಮುದಾಯದ ಮತಗಳಾಗಿದ್ದು ತಾವುಗಳು ಪರಿವರ್ತನೆಯಾಗಿ ದೇಶದ ಪರಿಸ್ಥಿತಿಯನ್ನು ಅರ್ಥ ಮಾಡಿಕೊಂಡು ಭಾರತೀಯ ಜನತಾ ಪಕ್ಷವನ್ನು ಬೆಂಬಲಿಸಲು ಸಂಘಟಿತರಾಗಿ ಬರಬೇಕೆಂದು ಕರೆ ಕೊಟ್ಟರು.

ನೂರಾರು ಕಾರ್ಯಕರ್ತರೊಂದಿಗೆ ಕಾಂಗ್ರೆಸ್ ಪಕ್ಷವನ್ನು ಬಿಟ್ಟು ಬಿಜೆಪಿ ಸೇರ್ಪಡೆಯಾದ ಗುರು ಚಲವಾದಿ ಮಾತನಾಡಿ, ಕಳೆದ 25 ವರ್ಷಗಳಿಂದ ಆ ಪಕ್ಷದ ಕಾರ್ಯಕರ್ತನಾಗಿ ನನ್ನದೇ ಆದ ವ್ಯಕ್ತಿತ್ವವನ್ನು ರೂಪಿಸಿಕೊಂಡು ಸಾಮಾಜಿಕ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವದನ್ನು ಗುರುತಿಸಿ ರಾಜಕೀಯವಾಗಿ ಎತ್ತರಕ್ಕೆ ಬೆಳೆಯಬಾರದು ಎನ್ನುವ ದುಷ್ಟ ಬುದ್ದಿಯನ್ನು ತೋ-ರಿಸಿದ ಕಾಂಗ್ರೆಸ್ ಪಕ್ಷದ ಬಸವನ ಬಾಗೇವಾಡಿ ಮತಕ್ಷೇತ್ರದ ಮುಖಂಡರ ನಡವಳಿಕೆಗೆ ಬೇಸತ್ತು ನಾನು ಕಾಂಗ್ರೆಸ್ ಪಕ್ಷದಲ್ಲಿದ್ದರೂ ನನ್ನನ್ನು ರಾಜಕೀಯವಾಗಿ ಬೆಳೆಯಲು ಸಹಕರಿಸಿದ ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿಯವರು ಮತ್ತು ಬಿಜೆಪಿ ಪಕ್ಷವು ತಳಮಟ್ಟದ ಕಾರ್ಯಕರ್ತರನ್ನು ಗುರುತಿಸಿ ಅವರಿಗೆ ರಾಜಕೀಯ ಕ್ಷೇತ್ರದಲ್ಲಿ ಉನ್ನತ ಸ್ಥಾನ ಕೊಟ್ಟಿರುವ ಉದಾಹರಣೆಯನ್ನು ತಿಳಿದುಕೊಂಡು ಬೇಷರತ್ತಾಗಿ ಬಿಜೆಪಿ ಸೇರ್ಪಡೆಯಾಗಿದ್ದೇನೆ ಎಂದರು.

ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ, ಚಂದ್ರಶೇಖರ ಕವಟಗಿ, ಮಂಡಲ ಅಧ್ಯಕ್ಷ ಸಿದ್ದರಾಮ ಕಾಖಂಡಕಿ, ಪದ್ಮಾವತಿ ಗುಡಿ, ಶಾಂತಾಬಾಯಿ ಬೀಳಗಿ, ಪರವೀನಬಾನು ಟಕ್ಕಳಕಿ, ಚಿದಾನಂದ ಚಲವಾದಿ, ಅಖಿಲಗೌಡ ಪಾಟೀಲ, ಸಗರೆಪ್ಪ ಮುರನಾಳ, ಜಗದೀಶ ಸುಣಗದ, ಪ್ರಶಾಂತ ಪವಾರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಪಡಗಾನೂರದಲ್ಲಿ ಸಂಭ್ರಮದ ಸೋಮೇಶ್ವರ ಜಾತ್ರಾ ಮಹೋತ್ಸವ



■ ಉದಯರಶ್ಮಿ ದಿನಪತ್ರಿಕೆ

**ದೇವರಹಿಪ್ಪರಗಿ:** ಪಡಗಾನೂರ ಗ್ರಾಮದ ಐತಿಹಾಸಿಕ ಸೋಮೇಶ್ವರ ಜಾತ್ರಾಮಹೋತ್ಸವ ರಥೋತ್ಸವ ಹಾಗೂ ನಂದಿಕೋಲ ಮೆರವಣಿಗೆಯೊಂದಿಗೆ ಭಾನುವಾರ ಸಂಪನ್ನಗೊಂಡಿತು.

ಗ್ರಾಮದ ಸಾಂಪ್ರದಾಯಿಕ ಸೋಮೇಶ್ವರ ಜಾತ್ರಾ ಮಹೋತ್ಸವ ದಿ:19 ರಿಂದ ಕಲಬುರಗಿ ಶ್ರೀಶರಣಬಸವೇಶ್ವರ ಪುರಾಣದಿಂದ ಆರಂಭಗೊಂಡು ನಂತರ ರೊಟ್ಟಿ ಬುತ್ತಿ ಜಾತ್ರೆ, ಮುತ್ತೈದೆಯರಿಗೆ ಉಡಿ ತುಂಬುವದು, ಉಚಿತ ನೇತ್ರ ಹಾಗೂ ಹೃದಯ ರೋಗ ತಪಾಸಣಾ ಶಿಬಿರ, ಮುಕ್ತ ಕಬಡ್ಡಿ ಪಂದ್ಯಾವಳಿಗಳಂತ ಹಲವು ಕಾರ್ಯಕ್ರಮಗಳ ಮೂಲಕ ಸಾಂಗವಾಗಿ ಸಾಗಿಬಂದು ದಿ:29 ರಂದು ಬೆಳಿಗ್ಗೆ ಪುರಾಣ ಮಹಾಮಂಗಲ ನಂತರ ಶ್ರೀಸೋಮೇಶ್ವರ, ಮಲ್ಲಯ್ಯ, ಲಗಮಾದೇವಿ, ಕೆಂಚರಾಯ ಹಾಗೂ ಷ.ಬ್ರ. ವೀರಭದ್ರಶ್ರೀಗಳ ಪಲ್ಲಕ್ಕಿ ಉತ್ಸವ ಪುರವಂತರ ಸೇವೆ ಸಹಿತ ಧಾರ್ಮಿಕ ಕಾರ್ಯಗಳು ವಾದ್ಯ,ವೈಭವಗಳೊಂದಿಗೆ ಜರುಗಿದವು. ನಂತರ ಅಗ್ನಿಪ್ರವೇಶ ಮತ್ತು ಮಹಾಪ್ರಸಾದ ಜರುಗಲ್ಪಟ್ಟವು. ಸಾಯಂಕಾಲ ನಂದಿಕೋಲ ಮೆರವಣಿಗೆಯೊಂದಿಗೆ ರಥೋತ್ಸವ ಆರಂಭಗೊಂಡಿತು.

ಸಾಯಂಕಾಲ ಹೂವಿನಹಾರ ಹಾಗೂ ತಳಿರು ತೋರಣಗಳಿಂದ ಶೃಂಗಾರಗೊಂಡ ರಥ(ತೇರ)ಕ್ಕೆ ನೆರೆದ ಸಾವಿರಾರು ಜನ ಭಕ್ತರು ಜಯಕಾರ ಉದ್ಘೋಶಗಳಿಂದ ಚಾಲನೆ ನೀಡಿದರು. ರಥೋತ್ಸವಕ್ಕೆ ವಿವಿಧ ಪ್ರದೇಶಗಳಿಂದ ಬಂದ ಭಕ್ತಸಮೂಹ ಯಾವುದೇ ಅಡ್ಡಿ ಆತಂಕಗಳಿಲ್ಲದ ಉತ್ಸಾಹದಿಂದ ರಥವನ್ನು ಸರಾಗವಾಗಿ ಎಳೆದು ತಮ್ಮ ಭಕ್ತಿ, ಭಾವ ತೋರಿದರು.

ಈ ಸಮಯದಲ್ಲಿ ಮಹಿಳೆಯರು, ಮಕ್ಕಳು, ಯುವಕರು ತಾವು ತಂದ ಉತ್ತತ್ತಿ, ಬಾಳೆಹಣ್ಣುಗಳನ್ನು ರಥೋತ್ಸವ ಸಾಗುವಾಗ ಅದರ ಮೇಲೆ ಎರೆಚಿ ಸಂತಸಪಟ್ಟರು.

# ಸಿಪಿಐ ರಮೇಶ ಛಾಯಾಗೋಳ ಸಿಎಂ ಚಿನ್ನದ ಪದಕಕ್ಕೆ ಭಾಜನ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಕೋರವಾರ ಗ್ರಾಮದ ಸದ್ಯ ಬೆಂಗಳೂರು ಸದ್ದುಗುಂಟೆ ಪಾಳ್ಯ ಠಾಣೆಯಲ್ಲಿ ಸಿಪಿಐ ಆಗಿ ಕಾರ್ಯ ನಿರ್ವಹಿಸುತ್ತಿರುವ ರಮೇಶ ಛಾಯಾಗೋಳ 2025ನೇ ಸಾಲಿನ ಮುಖ್ಯಮಂತ್ರಿಗಳ ಚಿನ್ನದ ಪದಕಕ್ಕೆ ಭಾಜನರಾಗಿದ್ದಾರೆ.

ವಿಜಯಪುರ, ಬಬಲೇಶ್ವರ, ಮನಗೂಳಿ, ಹುಕ್ಕೇರಿ, ಹುಬ್ಬಳ್ಳಿಗಳಲ್ಲಿ ಪಿಎಸ್ಐ ಆಗಿ ಸೇವೆ ಸಲ್ಲಿಸಿ ನಂತರ ಪದೋನ್ನತಿ ಹೊಂದಿ ಯಮಕನಮರಡಿ, ಕಲಬುರ್ಗಿಯಲ್ಲಿ ಸೇವೆ ಸಲ್ಲಿಸಿ ಈಗ ಬೆಂಗಳೂರಿನಲ್ಲಿ ಸೇವೆ ಸಲ್ಲಿಸುತ್ತಿರುವ ಇವರು ಕಳೆದ ವರ್ಷ ಕೇಂದ್ರೀಯ ಗೃಹ ಮಂತ್ರಿಗಳ ಇಲಾಖೆಯ ಪ್ರಶಸ್ತಿ ಪಡೆದಿದ್ದರು.

# ಕನ್ನಡ ಸಾಹಿತ್ಯ ಸಮ್ಮೇಳನ ಜ್ಞಾನದ ಹಬ್ಬ :ಡಾ.ಸಂದೀಪ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ಕನ್ನಡ ಸಾಹಿತ್ಯ ಸಮ್ಮೇಳನವೆಂದರೆ ಅದು ಕನ್ನಡಿಗರ ಹಬ್ಬ. ಇಲ್ಲಿ ಹಲವಾರು ವಿಚಾರಧಾರೆಗಳು ಅನಾವರಣಗೊಳ್ಳುವುದರಿಂದ ಇದು ಜ್ಞಾನದ ಹಬ್ಬವೂ ಹೌದು. ಇಂತಹ ಕನ್ನಡದ ಅಸ್ಮಿತೆಯ, ಕನ್ನಡಾಂಬೆಯ ನುಡಿ ಜಾತ್ರೆಗೆ ಅಖಂಡ ಸಿಂದಗಿ ತಾಲೂಕಿನ ವೈದ್ಯರೆಲ್ಲರೂ ತನು-ಮನ, ಧನದಿಂದ ಸಂಪೂರ್ಣ ಸಹಾಯ ಸಹಕಾರ ನೀಡುವ ಭರವಸೆಯನ್ನು ತಾಲೂಕು ವೈದ್ಯರ ಸಂಘದ ಅಧ್ಯಕ್ಷ ಡಾ.ಸಂದೀಪ್ ಪಾಟೀಲ ವ್ಯಕ್ತಪಡಿಸಿದರು.

ಸಿಂದಗಿ ನಗರದ ತಾಲೂಕು ಪಂಚಾಯತ್ ಸಭಾಭವನದಲ್ಲಿ 21ನೆಯ ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನದ ಪೂರ್ವಭಾವಿಯಾಗಿ ಹಮ್ಮಿಕೊಂಡ ವೈದ್ಯರುಗಳ ಸಭೆಯಲ್ಲಿ ಮಾತನಾಡಿದ ಅವರು, ಸಿಂದಗಿ ತಾಲೂಕಿನಲ್ಲಿ ಜಿಲ್ಲಾ ಸಾಹಿತ್ಯ ಸಮ್ಮೇಳನ ನಡೆಯುತ್ತಿರುವುದು ಹೆಮ್ಮೆಯ ವಿಷಯ. ಎರಡು ದಿನಗಳವರೆಗೆ ಜರುಗುವ ಅಕ್ಷರ ಜಾತ್ರೆಯ ಹಬ್ಬದಲ್ಲಿ ಎಲ್ಲರೂ ಪಾಲ್ಗೊಂಡು ಸಮ್ಮೇಳನದ ಯಶಸ್ಸಿಗೆ ಕೈಜೋಡಿಸುವುದಾಗಿ ಹೇಳಿದರು.

ಈ ವೇಳೆ ಕಾರ್ಯಕ್ರಮದ ರೂಪರೇಷೆಯ ಕುರಿತು ವಿವರಿಸಿದ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಜಿಲ್ಲಾಧ್ಯಕ್ಷ ಹಾಸಿಂಪೀರ ವಾಲಿಕಾರ ಮಾತನಾಡಿ, ಸಮ್ಮೇಳನದ ಉದ್ಘಾಟನೆಯ ಪ್ರಥಮ ದಿನ ಸಾರೋಟಿನಲ್ಲಿ ಸರ್ವಾಧ್ಯಕ್ಷರ ಮೆರವಣಿಗೆ, ಜೊತೆ ಜೊತೆಗೆ ಸಾವಿರಾರು ಮಕ್ಕಳು, ತಾಯಂದಿರಿಂದ ಕುಂಭಮೇಳ, ಎರಡನೆಯ ದಿನ ವಿವಿಧ ಗ್ರಾಮಗಳಿಂದ ಆಗಮಿಸುವ ಮಾತೆಯರಿಂದ ಬುತ್ತಿ ಜಾತ್ರೆ ಜರುಗುವುದು. ವಿವಿಧ ಗೋಷ್ಠಿಗಳಾದ ಮಹಿಳಾ ಘೋಷ್ಠಿ, ವಚನ ಸಾಹಿತ್ಯ ಗೋಷ್ಠಿ, ಕವಿಗೋಷ್ಠಿ, ಬಂಡಾಯ ಸಾಹಿತ್ಯದ ಗೋಷ್ಠಿ ಹೀಗೆ ಪ್ರತಿ ಗೋಷ್ಠಿಯಲ್ಲೂ ಅನುಭವಿ ಸಂಪನ್ಮೂಲ ವ್ಯಕ್ತಿಗಳಿಂದ ಉಪನ್ಯಾಸ, ಮಕ್ಕಳ ಹಾಗೂ ವಿವಿಧ ಕಲಾ ತಂಡಗಳಿಂದ ಸಾಂಸ್ಕೃತಿಕ ಕಾರ್ಯಕ್ರಮ ಜರುಗುವ ಎಂದರು.



ಇದೇ ಸಂದರ್ಭದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ತಾಲೂಕಾಧ್ಯಕ್ಷ ವಾಯ್.ಸಿಮಯೂರ್ ಮಾತನಾಡಿ, ತಾಲೂಕಿಗೆ ಕೊಟ್ಟ ವಿಶಿಷ್ಠ ಅವಕಾಶವನ್ನು ಸದುಪಯೋಗ ಪಡಿಸಿಕೊಂಡು ಕಾರ್ಯಕ್ರಮದ ಯಶಸ್ವಿಗೆ ಸಹಕರಿಸಬೇಕೆಂದು ಎಲ್ಲರಲ್ಲಿ ಮನವಿ ಮಾಡಿಕೊಂಡರು.

ವೇದಿಕೆಯ ಮೇಲೆ ಆಯುಷ್ ಫೆಡರೇಶನ್ನಿನ ಅಧ್ಯಕ್ಷ ಡಾ.ಶಿವಾನಂದ್ ಹೊಸಮನಿ, ಚಿಕ್ಕ ಮಕ್ಕಳ ವೈದ್ಯ ಡಾ.ಹಿರೇಗೌಡರ, ಡಾ.ಮಹಾಂತೇಶ ಹಿರೇಮಠ ಇದ್ದರು. ಸಭೆಯಲ್ಲಿ ತಾಲೂಕು ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಎಸ್.ಎಸ್.ಬಾಗೇವಾಡಿ, ಡಾ.ಅನಿಲ ಹೂಗಾರ, ಡಾ.ರವಿ ಬಿರಾದಾರ, ಡಾ.ವಿಶ್ವರಾಧ್ಯ ಲೋಣಿ, ಡಾ.ಸುಧಾಕರ ಶಾಬಾದಿ. ಡಾ.ಅಬೂಬಕರ್ ಮುಲ್ಲಾ, ಡಾ.ವೀರೇಶ್ ಅಂಗಡಿ, ಡಾ.ಚೇತನ್ ಪಾಟೀಲ. ಪತ್ರಕರ್ತರಾದ ಅಂಬರೀಶ ಸುಣಗಾರ, ನಾಗೇಶ್ ತಳವಾರ್, ನಿಂಗರಾಜ ಅತನೂರ, ವಿ.ಜಿ.ಪಾಟೀಲ, ಶಿವಕುಮಾರ್ ಶಿವಶಿಂಪಿಗೇರ, ಸುನಂದಾ ಯಂಪುರೆ, ನೀಲಮ್ಮ ಯಡ್ರಾಮಿ, ಶಾರದಾ ಬೆಟಗೇರಿ, ಸೈನಾಬಿ ಮಸಳಿ, ಲಕ್ಷ್ಮೀ ಪೊಲೀಸ್‌ಪಾಟೀಲ, ವರ್ಷಾಪಾಟೀಲ ಸೇರಿದಂತೆ ಸಾಹಿತ್ಯಾಭಿಮಾನಿಗಳು ಇದ್ದರು.


ಕಸಾಪ ಗೌರವ ಕಾರ್ಯದರ್ಶಿ ಆನಂದ ಶಾಬಾದಿ ಸ್ವಾಗತಿಸಿ ನಿರೂಪಿಸಿದರು. ರಾಜಶೇಖರ ನರಗೋದಿ ವಂದಿಸಿದರು.

# ರಕ್ತದಾನ ಮೂಲಕ ಜೀವಗಳನ್ನು ಉಳಿಸಲು ನೆರವಾಗಿ: ಗುರುರಾಜಗೌಡ

■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ರಕ್ತದಾನ ಶ್ರೇಷ್ಠದಾನ. ಅದ್ದರಿಂದ ಯುವಕರು ರಕ್ತದಾನ ಮಾಡುವ ಮೂಲಕ ಜೀವಗಳನ್ನು ಉಳಿಸಲು ಸಹಕರಿಸಿ ಎಂದು ಚಾಂದಕವಟೆ ಗ್ರಾಮದ ಮಾಜಿ ಜಿಲ್ಲಾ ಪಂಚಾಯತ ಸದಸ್ಯ ಗುರುರಾಜಗೌಡ ಪಾಟೀಲ ಹೇಳಿದರು.

ಸಿಂದಗಿ ತಾಲೂಕಿನ ಚಾಂದಕವಟೆ ಗ್ರಾಮದ ಆರಾಧ್ಯ ದೈವ ಶ್ರೀ ಬಸವೇಶ್ವರ ಜಾತ್ರಾ ಪ್ರಯುಕ್ತ ಬಸವೇಶ್ವರ ಜಾತ್ರಾ ಕಮೀಟಿ, ಪ್ರಾಥಮಿಕ ಆರೋಗ್ಯ ಕೇಂದ್ರ ಚಾಂದಕವಟೆ, ತಾಲೂಕಾ ಆರೋಗ್ಯ ಇಲಾಖೆ, ಜಿಲ್ಲಾ ರಕ್ತನಿಧಿ ಕೇಂದ್ರದ ವತಿಯಿಂದ ಹಮ್ಮಿಕೊಂಡ ಸ್ವಯಂ ಪ್ರೇರಿತ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಮಾತನಾಡಿದ ಅವರು, ರಕ್ತವನ್ನು ಕೃತಕವಾಗಿ ಉತ್ಪಾದಿಸಲು ಸಾಧ್ಯವಿಲ್ಲದ ಕಾರಣ ಅಗತ್ಯದ ಮತ್ತು ತುರ್ತುಚಿಕಿತ್ಸೆಯ ಸಮಯದಲ್ಲಿ ರಕ್ತದಾನಿಗಳ ರಕ್ತವನ್ನೇ ರೋಗಿಗಳು ಅವಲಂಬಿಸಿರುತ್ತಾರೆ. ಆದ ಕಾರಣ ಯುವಕರ ರಕ್ತದಾನ ಮಾಡಿ ಜೀವ ಉಳಿಸಿ ಎಂದು ಕರೆ ನೀಡಿದರು.




ಈ ವೇಳೆ ಡಾ.ಎ.ಎ.ಮಾಗಿ ಮಾತನಾಡಿ, ಅನಿರೀಕ್ಷಿತ ಅಪಘಾತಗಳು, ತುರ್ತುಶಸ್ತ್ರ ಚಿಕಿತ್ಸೆಗಳ ಸಮಯದಲ್ಲಿ, ಕ್ಯಾನ್ಸರ್ ರೋಗಿಗಳಿಗೆ, ಗರ್ಭಿಣಿ ಸ್ತ್ರೀಯರಿಗೆ ಹೆರಿಗೆ ಸಮಯದಲ್ಲಿ ರಕ್ತದ ಆವಶ್ಯಕತೆ ಹೆಚ್ಚಾಗಿ ಇರುತ್ತದೆ. ಇದಲ್ಲದೆ ತಲಸ್ಸೇಮಿಯಾ (ಆನುವಂಶಿಕ ನ್ಯೂನತೆ) ಮತ್ತು ಹಿಮೊಫಿಲಿಯಾ (ಕುಸುಮ ರೋಗ) ಇರುವ ವ್ಯಕ್ತಿಗಳಿಗೆ ಜೀವನ ಪರ್ಯಂತ ರಕ್ತದಾನಿಗಳಿಂದ ರಕ್ತದ ಆವಶ್ಯಕತೆ ಇರುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಗ್ರಾಮದ ಮುಖಂಡರಾದ ಸಂಗನಗೌಡ ಬಿರಾದಾರ, ಪಂಡಿತ ಚೌಧರಿ, ರಮೇಶಗೌಡ ಬಿರಾದಾರ, ಬಸಲಿಂಗಪ್ಪಗೌಡ ಪಾಟೀಲ, ಶ್ರೀಶೈಲ ಜೋಳದ, ಜಗದೀಶ ಪಾಟೀಲ ವೈದ್ಯಾಧಿಕಾರಿ ಡಾ.ಅಶೋಕ ಚೌಧರಿ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಡಿ.ಕುಲಕರ್ಣಿ, ಪಿ.ವಾಯ್.ಚೌಡಕಿ ಸೇರಿದಂತೆ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು, ದೇವಸ್ಥಾನ ಕಮಿಟಿಯ ಸದಸ್ಯರು ಇದ್ದರು.

# ವಚನಕಾರ ಶಿವಶರಣ ವೀರ ಗೊಲ್ಲಾಳೇಶ್ವರ

■ ಉದಯರಶ್ಮಿ ದಿನಪತ್ರಿಕೆ


**ನಾಳೆ (ಎಪ್ರಿಲ್ 02 ಗುರುವಾರ) ಗೋಲಗೇರಿ ಗೊಲ್ಲಾಳೇಶ್ವರ ಜಾತ್ರೆಯ ನಿಮಿತ್ತ ಈ ವಿಶೇಷ ಲೇಖನ**

12ನೇ ಶತಮಾನವು ಕರ್ನಾಟಕ ಸಾಹಿತ್ಯ ಚರಿತ್ರೆಯಲ್ಲಿ ಅವಿಸ್ಮರಣೀಯವಾದ ಸುವರ್ಣಯುಗವಾಗಿದೆ. ಈ ಕಾಲಘಟ್ಟದಲ್ಲಿ ಶರಣರು ತಮ್ಮ ಅನುಭವಗಳಿಂದ ಹೊರಹೊಮ್ಮಿದ ವಚನಗಳ ಮೂಲಕ ಕನ್ನಡ ಸಾಹಿತ್ಯಕ್ಕೆ ಅಪಾರವಾದ ಶ್ರೀಮಂತಿಕೆಯನ್ನು ತಂದಿದ್ದಾರೆ. ಈ ಶರಣ ಸಂಪ್ರದಾಯವು ಕೇವಲ ಧಾರ್ಮಿಕ ಚಳವಳಿಯಷ್ಟೇ ಅಲ್ಲ, ಅದು ಒಂದು ಸಾಮಾಜಿಕ ಕ್ರಾಂತಿ, ಒಂದು ಮೌಲ್ಯಾಧಾರಿತ ಜೀವನ ಪದ್ಧತಿ, ಮತ್ತು ಮಾನವೀಯತೆಯ ಮಹೋನ್ನತ ಸಂದೇಶವಾಗಿತ್ತು. "ಶರಣ" ಎಂದರೆ ತನ್ನನ್ನು ತಾನು ಅರಿತವನು, ತನ್ನ ಅಂತರಂಗವನ್ನು ಶುದ್ಧಗೊಳಿಸಿಕೊಂಡವನು, ಶಿವನನ್ನು ತನ್ನೊಳಗೆ ಕಂಡವನು. ಇವರು ಕೇವಲ ಭಕ್ತರಲ್ಲ, ಅವರು ಚಿಂತಕರು, ಕಾಯಕಯೋಗಿಗಳು, ಸಮಾಜ ಸುಧಾರಕರು ಮತ್ತು ಸತ್ಯದ ಸಾಧಕರು.

ಶರಣರು ತಮ್ಮ ಜೀವನದಲ್ಲಿ "ಕಾಯಕವೇ ಕೈಲಾಸ" ಎಂಬ ತತ್ವವನ್ನು ಅಳವಡಿಸಿಕೊಂಡು, ಯಾವುದೇ ಕೆಲಸವನ್ನು ಹೀನ-ಮೇಲು ಎನ್ನದೆ, ಪ್ರಾಮಾಣಿಕವಾಗಿ ಮಾಡುವುದೇ ದೇವಾರಾಧನೆ ಎಂದು ಸಾರಿದರು. ಇವರು ಗುರುವಿಗೆ ತನವನ್ನು, ಲಿಂಗಕ್ಕೆ ಮನವನ್ನು, ಜಂಗಮಕ್ಕೆ ಧನವನ್ನು ಅರ್ಪಿಸಿದವರು. ಇವರ ನಡೆ-ನುಡಿಗಳು ಒಂದೇ ಆಗಿದ್ದು, ಜೀವನವೇ ಒಂದು ಸಾಧನೆಯಾಗಿತ್ತು. ಹೊಗಳಿಕೆಗೆ ಹಿಗ್ಗದೆ, ತೆಗಳಿಕೆಗೆ ಕುಗ್ಗದೆ, ಮರಣವನ್ನೇ ಮಹಾನವಮಿ ಎಂದು ಭಾವಿಸಿದ ಧೈರ್ಯಶಾಲಿಗಳು. ಇಂತಹ ಶರಣರ ಪವಿತ್ರ ನಾಡಾದ ವಿಜಯಪುರ ಜಿಲ್ಲೆಯು ಅನೇಕ ಮಹಾನ್ ಶಿವಶರಣರನ್ನು ಕೊಟ್ಟಿದೆ. ಆ ಮಹಾನ್ ಶರಣರಲ್ಲಿ ಗೋಲಗೆರಿಯ ವೀರ ಗೊಲ್ಲಾಳೇಶ್ವರರು ಪ್ರಮುಖರು.

ವಚನ ಪಿತಾಮಹರೆಂದು ಪ್ರಸಿದ್ಧರಾದ ಹಳಕಟ್ಟೆಯವರು ಪಾಲ್ಕುರಿಕೆ ಸೋಮರಾಧ್ಯನು ಗಣಸಹಸ್ರದಲ್ಲಿ ಸೂಚಿಸಿದ ಶಿವಶರಣರನ್ನು "770 ಅಮರ ಗಣಾಧೀಶ್ವರ ಚರಿತ್ರೆ" ಎಂಬ ಗ್ರಂಥದಲ್ಲಿ ಪ್ರಕಟಿಸಿದ್ದು, ಅದರಲ್ಲಿನ 127ನೇ ಸ್ಥಾನವನ್ನು ಪಡೆದಿರುವವರು ವಚನಕಾರ ವೀರ ಗೊಲ್ಲಾಳೇಶ್ವರರು. ಇದರಿಂದಲೇ ಅವರ ಮಹತ್ವ ಮತ್ತು ಪ್ರಭಾವವನ್ನು ಅರ್ಥಮಾಡಿಕೊಳ್ಳಬಹುದು.

ವಿಜಯಪುರ ಜಿಲ್ಲೆಯ ಸಿಂದಗಿ ತಾಲೂಕಿನ ಗೋಲಗೆರಿಯಿಂದ ಸುಮಾರು 3-4 ಕಿಲೋಮೀಟರ್ ದೂರದಲ್ಲಿರುವ ದವಳಾರ ಎಂಬ ಚಿಕ್ಕ ಗ್ರಾಮದಲ್ಲಿ ಕುರುಬರ ಮನೆತನದಲ್ಲಿ ಕಾಟಕೂಟ ಮತ್ತು ದುಗ್ಗಲವ್ವ ದಂಪತಿಗಳಿಗೆ ಗೊಲ್ಲಾಳನು ಜನಿಸಿದನು. ಅವನಿಗೆ



ಗೊಲ್ಲಾಳರಾಯ, ವೀರಗೊಲ್ಲಾಳ, ಕುರುಬಗೊಲ್ಲಾಳ, ಗೊಲ್ಲಾಳೇಶ್ವರ, ಕಾಟಕೂಟ ಸೂತಗೊಲ್ಲ, ಗೊಲ್ಲನ ಮಗ ಗೊಲ್ಲಾಳ ಇತ್ಯಾದಿ ವಿವಿಧ ಹೆಸರುಗಳಿಂದ ಕರೆಯಲ್ಪಟ್ಟರೂ "ಗೋಲಗೆರಿಯ ಗೊಲ್ಲಾಳ" ಎಂಬ ಹೆಸರೇ ಹೆಚ್ಚು ಪ್ರಸಿದ್ಧಿಯಾಯಿತು. ಕ್ರಿ.ಶ. 1160ರ ಸುಮಾರಿಗೆ ಅವನು ಜನಿಸಿದ್ದಾನೆಂದು ತಜ್ಞರು ಅಭಿಪ್ರಾಯಪಡುತ್ತಾರೆ.

ಗೊಲ್ಲಾಳನು ತನ್ನ ಕುಲವೃತ್ತಿಯಾದ ಕುರಿ ಕಾಯುವ ಕೆಲಸವನ್ನೇ ಜೀವನದ ಮಾರ್ಗವನ್ನಾಗಿ ಮಾಡಿಕೊಂಡನು. ಪ್ರತಿದಿನ ದವಳಾರ ಗ್ರಾಮದಿಂದ ಗೋಲಗೆರಿಯತ್ತ ಕುರಿಗಳನ್ನು ಮೇಯಿಸಲು ಕರೆದುಕೊಂಡು ಹೋಗುತ್ತಿದ್ದನು. ಸರಳ ಜೀವನ, ಶುದ್ಧ ಮನಸ್ಸು ಮತ್ತು ನಿರ್ಲೋಭ ಸ್ವಭಾವವು ಅವನ ಜೀವನದ ಮುಖ್ಯ ಲಕ್ಷಣಗಳಾಗಿದ್ದವು. ಅವನು ಅಜ್ಞಾನಿಯಲ್ಲ, ಆದರೆ ಲೋಕಜ್ಞಾನಕ್ಕಿಂತ ಆಧ್ಯಾತ್ಮಿಕ ಅರಿವಿಗೆ ಹೆಚ್ಚಿನ ಮಹತ್ವ ನೀಡಿದವನಾಗಿದ್ದನು.

ಒಂದು ದಿನ ಉರಿ ಬಿಸಿಲಿನ ಮಧ್ಯಾಹ್ನದಲ್ಲಿ ಗೊಲ್ಲಾಳನು ತನ್ನ ಕುರಿಗಳನ್ನು ಮರದ ನೆರಳಿನಲ್ಲಿ ನಿಲ್ಲಿಸಿ ವಿಶ್ರಾಂತಿ ಪಡೆಯುತ್ತಿದ್ದಾಗ, ಶ್ರೀಶೈಲ ಮಲ್ಲಿಕಾರ್ಜುನ ದರ್ಶನಕ್ಕೆ ಪಾದಯಾತ್ರೆ ಹೋಗುತ್ತಿದ್ದ ಭಕ್ತರನ್ನು ಕಂಡನು. ಅವರು ಕಾಂಬಿ ಹೊತ್ತುಕೊಂಡು, ಬಿಸಿಲಿನ ತಾಪವನ್ನೂ ಲೆಕ್ಕಿಸದೆ, ಭಕ್ತಿಭಾವದಿಂದ ಸಾಗುತ್ತಿದ್ದರು. ಇದನ್ನು ಕಂಡ ಗೊಲ್ಲಾಳನ ಮನಸ್ಸಿನಲ್ಲಿ ಕುತೂಹಲ ಮೂಡಿತು. "ನೀವು ಎಲ್ಲಿಗೆ ಹೋಗುತ್ತೀರಿ?" ಎಂದು ಕೇಳಿದಾಗ, ಅವರು "ನಾವು ಶ್ರೀಶೈಲ ಮಲ್ಲಿಕಾರ್ಜುನ ದರ್ಶನಕ್ಕೆ ಹೋಗುತ್ತಿದ್ದೇವೆ. ಅದು ಕೈಲಾಸಕ್ಕೆ ಸಮಾನವಾದ ಕ್ಷೇತ್ರ. ಪಾದಯಾತ್ರೆಯ ಮೂಲಕ ಹೋದರೆ ಪುಣ್ಯ ಲಭಿಸುತ್ತದೆ" ಎಂದು ತಿಳಿಸಿದರು.




ಈ ಮಾತುಗಳು ಗೊಲ್ಲಾಳನ ಮನಸ್ಸಿನಲ್ಲಿ ಭಕ್ತಿಯ ಬೀಜವನ್ನು ಬಿತ್ತಿದವು.

ನಂದಯ್ಯ ಸ್ವಾಮಿಗಳಿಂದ ಲಿಂಗ ತರುವಂತೆ ಕೇಳಿದ ಗೊಲ್ಲಾಳನು ತನ್ನ ಪಾದರಕ್ಷೆಗಳನ್ನು ನೀಡಿ, ಬದಲಾಗಿ ಲಿಂಗವನ್ನು ತಂದುಕೊಡಬೇಕೆಂದು ವಿನಂತಿಸಿದನು. ನಂದಯ್ಯನು ಒಪ್ಪಿಕೊಂಡರೂ, ಮರಳಿ ಬಂದಾಗ ಲಿಂಗ ತರುವುದನ್ನು ಮರೆತು, ಅಲ್ಲಿದ್ದ ಕುರಿಯ ಹಿಕ್ಕಿಯನ್ನು ಲಿಂಗವೆಂದು ನೀಡಿ ಮೋಸ ಮಾಡಿದನು. ಆದರೆ ಗೊಲ್ಲಾಳನು ಅದನ್ನು ನಿಜವಾದ ಲಿಂಗವೆಂದು ನಂಬಿ ಭಕ್ತಿಯಿಂದ ಪೂಜಿಸಲು ಪ್ರಾರಂಭಿಸಿದನು. ಇಲ್ಲಿ ಗೊಲ್ಲಾಳನ ಭಕ್ತಿಯ ಶುದ್ಧತೆ ಮತ್ತು ನಂಬಿಕೆಯ ಗಾಢತೆ ಸ್ಪಷ್ಟವಾಗಿ ಕಾಣುತ್ತದೆ.

ಗೊಲ್ಲಾಳನು ಪ್ರತಿದಿನ ಆ "ಲಿಂಗ"ವನ್ನು ಹೂವು-ಪತ್ರಿಕೆಗಳಿಂದ ಅಲಂಕರಿಸಿ, ತನ್ನ ಕುರಿಗಳ ಹಾಲಿನಿಂದ ಅಭಿಷೇಕ ಮಾಡುತ್ತಿದ್ದನು. ಅವನಿಗೆ ಅದು ಕೇವಲ ಹಿಕ್ಕಿ ಅಲ್ಲ, ಅದು ಶಿವಸ್ವರೂಪ. ಭಕ್ತಿಯು ಯಾವ ರೂಪದಲ್ಲಾದರೂ ದೇವರನ್ನು ಕಾಣಿಸುತ್ತದೆ ಎಂಬ ಸತ್ಯವನ್ನು ಅವನು ತನ್ನ ಜೀವನದ ಮೂಲಕ ತೋರಿಸಿದನು. ಈ ಘಟನೆ ಅವನ ಜೀವನದ ಮಹತ್ವದ ತಿರುವಾಗಿತ್ತು.

ಒಂದು ದಿನ ಅವನ ತಂದೆ ಕಾಟಕೂಟನು ಮನೆಗೆ ಹಾಲು ಬಾರದ ಕಾರಣ ವಿಚಾರಿಸಲು ಕುರಿದೊಡ್ಡಿಗೆ ಬಂದನು. ಅಲ್ಲಿ ಮಗನು ಲಿಂಗದ ಮೇಲೆ ಹಾಲು ಸುರಿಸುತ್ತಿರುವುದನ್ನು ಕಂಡು ಕೋಪಗೊಂಡನು. ಅವನು ಆ ಲಿಂಗವನ್ನು ತುಳಿದು ಒಡೆದುಬಿಟ್ಟನು. ಈ ದೃಶ್ಯವನ್ನು ಕಂಡ ಗೊಲ್ಲಾಳನು ಆಕ್ರೋಶದಿಂದ ತನ್ನ ತಂದೆಯನ್ನು ಹೊಡೆದು ಕೊಂದನು. ಆದರೆ ತಕ್ಷಣವೇ ತನ್ನ ಕೃತ್ಯವನ್ನು ಅರಿತು ಪಶ್ಚಾತ್ತಾಪ ಪಟ್ಟನು. ಈ ಕ್ಷಣದಲ್ಲಿ ಸ್ವತಃ ಶಿವನು ಪ್ರತ್ಯಕ್ಷನಾಗಿ ಗೊಲ್ಲಾಳನ ಭಕ್ತಿಯನ್ನು ಮೆಚ್ಚಿ, "ನಾನು ಬೇರೆಯಲ್ಲ, ನೀನು ಬೇರೆಯಲ್ಲ" ಎಂದು ಅನುಗ್ರಹಿಸಿ, ಅವನ ತಂದೆಗೆ ಮರುಜೀವ ನೀಡಿದನು. ಈ ಘಟನೆ ಗೊಲ್ಲಾಳನ ಭಕ್ತಿಯ ಶ್ರೇಷ್ಠತೆಯನ್ನು ಸಾರುತ್ತದೆ.

ಆ ದಿನದಿಂದ ಗೊಲ್ಲಾಳನು "ಗೊಲ್ಲಾಳೇಶ್ವರ" ಎಂದು ಪ್ರಸಿದ್ಧನಾದನು. ಕುರಿಯ ಹಿಕ್ಕೆಯೇ ಲಿಂಗವಾಗಿ ಪರಿವರ್ತಿತವಾಗಿರುವುದು ಭಕ್ತಿಯ ಮಹಿಮೆಗೂ ಸಾಕ್ಷಿಯಾಗಿದೆ. ಇಂದಿಗೂ ಗೋಲಗೆರಿಯಲ್ಲಿ ಈ ಪವಿತ್ರ ಸ್ಥಳವು ಭಕ್ತರ ಆರಾಧನೆಯ ಕೇಂದ್ರವಾಗಿದೆ.


ಗೊಲ್ಲಾಳೇಶ್ವರರ ವಚನಗಳು ಅವರ ಜೀವನದ ಅನುಭವಗಳಿಂದ ಹುಟ್ಟಿದವು. ಅವು ಕೇವಲ ಕಾವ್ಯವಲ್ಲ, ಅವು ಬದುಕಿನ ಮಾರ್ಗದರ್ಶಕ. ಕುರಿ, ಹೋತ, ತೋಳ, ಹುಲಿ, ಕಳ್ಳ ಇತ್ಯಾದಿ ರೂಪಕಗಳ ಮೂಲಕ ಅವರು ಜೀವನದ ಸತ್ಯಗಳನ್ನು ಸರಳವಾಗಿ ಮತ್ತು ಪರಿಣಾಮಕಾರಿಯಾಗಿ ವ್ಯಕ್ತಪಡಿಸಿದ್ದಾರೆ. ಅವರ ವಚನಗಳಲ್ಲಿ ಅಜ್ಞಾನ ನಿವಾರಣೆ, ಆತ್ಮಜ್ಞಾನ ಸಾಧನೆ, ಕಾಯಕದ ಮಹತ್ವ, ಸತ್ವವೃತ್ತಿ, ಸಾತ್ವಿಕ ಜೀವನ ಮತ್ತು ದುರ್ಗುಣಗಳ ಜಯ ಇತ್ಯಾದಿ ವಿಷಯಗಳು ಸ್ಪಷ್ಟವಾಗಿ ಕಾಣುತ್ತವೆ.

ಅವರು ಹೇಳುವಂತೆ, " ಅಜ್ಞಾನವೆಂಬ ಹೊತನ ಕೊಯ್ದು, ಮೂಢಾಚರಣೆಯೆಂಬ ಕುರಿಯ ಚರ್ಮಸುಲಿದು ಜೀವಾತ್ಮನನ್ನು ಆವರಿಸಿರುವ ಅವಗುಣಗಳೆಂಬ ತೋಳುಗಳ ಗೆದ್ದು ವಿಚಾರವಂತಿಕೆಯ ಅರಿವಿನ ಕುರುಬ ಶರಣ ಕುಲದಲ್ಲಿ ಬೆರೆತು ವೀರ ಬೀರೇಶ್ವರ ಲಿಂಗವನ್ನರಿಯರಿ ಈ ವಚನವು ಜೀವನದ ಆಳವಾದ ಸತ್ಯವನ್ನು ಹೇಳುತ್ತದೆ. ಅಜ್ಞಾನ ಮತ್ತು ಮೂಢನಂಬಿಕೆಗಳನ್ನು ತೊರೆದು, ವೈಚಾರಿಕತೆ ಮತ್ತು ಜ್ಞಾನವನ್ನು ಅಳವಡಿಸಿಕೊಳ್ಳಬೇಕು ಎಂಬ ಸಂದೇಶವನ್ನು ನೀಡುತ್ತದೆ.

ಮತ್ತೊಂದು ವಚನದಲ್ಲಿ ಅವರು "ಹೋತನ ಹೊಡೆದು ಆಡಕೂಡಿ ಕುರಿಯನಿಲ್ಲಿಸಿ ಟಗರ ತಡೆದು ಹಿಂಡನೊಬ್ಬಳಿತೆ ಮಾಡಿ ಹುಲಿ, ತೋಳ, ಚೋರ, ಭಯಮಾ ಕಳೆದು, ಹಿಂಡಿಗೊಡೆಯನಾಗಿ ಕಾವ ಗೊಲ್ಲಾಳ ನೀನೇ ವೀರ ಬೀರೇಶ್ವರ". ದೇವರನ್ನು ಕುರುಬನಿಗೆ ಹೋಲಿಸಿ, ಮನುಷ್ಯರನ್ನು ಕುರಿಗಳಿಗೆ ಹೋಲಿಸುತ್ತಾರೆ. ಹೇಗೆ ಕುರುಬನು ತನ್ನ ಕುರಿಗಳನ್ನು ಹುಲಿ, ತೋಳ ಮತ್ತು ಕಳ್ಳರಿಂದ ರಕ್ಷಿಸುತ್ತಾನೋ, ಹಾಗೆಯೇ ದೇವರು ಮನುಷ್ಯರನ್ನು ದುರ್ಗುಣಗಳಿಂದ ರಕ್ಷಿಸುತ್ತಾನೆ ಎಂದು ಹೇಳುತ್ತಾರೆ. ಇದು ದೇವರ ಕರುಣೆ ಮತ್ತು ಮಾರ್ಗದರ್ಶನವನ್ನು ಸೂಚಿಸುತ್ತದೆ.

ಗೊಲ್ಲಾಳೇಶ್ವರರು ತಮ್ಮ ವಚನಗಳ ಮೂಲಕ ಸಮಾಜದಲ್ಲಿದ್ದ ಅಸಮಾನತೆ, ಜಾತಿ ವ್ಯವಸ್ಥೆ ಮತ್ತು ಅಂಧಶ್ರದ್ಧೆಗಳನ್ನು ತೀವ್ರವಾಗಿ ವಿರೋಧಿಸಿದರು. ಅವರು ಶಾಂತಿ, ಸಹಬಾಳ್ವೆ ಮತ್ತು ಸಹಕಾರದ ಮೌಲ್ಯಗಳನ್ನು ಸಮಾಜದಲ್ಲಿ ಬೆಳೆಸಲು ಶ್ರಮಿಸಿದರು. ಅವರ ಜೀವನವೇ ಒಂದು ಸಂದೇಶ: "ಭಕ್ತಿಯು ಶುದ್ಧವಾಗಿದ್ದರೆ ದೇವರು ಎಲ್ಲಿಯೂ ಇದ್ದಾನೆ."

ಇಂದಿಗೂ ಗೋಲಗೆರಿಯಲ್ಲಿ ಗೊಲ್ಲಾಳೇಶ್ವರರ ಜಾತ್ರೆ ಭಕ್ತಿಭಾವದಿಂದ ನಡೆಯುತ್ತದೆ. ದವನದ ಹುಣ್ಣಿಮೆ ದಿನ ಭವ್ಯ ರಥೋತ್ಸವ ನಡೆಯುವುದು ಅವರ ಜನಪ್ರಿಯತೆಯನ್ನು ತೋರಿಸುತ್ತದೆ. ಸಾವಿರಾರು ಭಕ್ತರು ಈ ಜಾತ್ರೆಯಲ್ಲಿ ಭಾಗವಹಿಸಿ, ಗೊಲ್ಲಾಳೇಶ್ವರರ ಆಶೀರ್ವಾದ ಪಡೆಯುತ್ತಾರೆ.



ಲೇಖನ

■ ಪ್ರಶಾಂತ ಕುಲಕರ್ಣಿ
ಉಪನ್ಯಾಸಕರು
ಸಿಂದಗಿ -586128 ವಿಜಯಪುರ ಜಿಲ್ಲೆ

# ದೇಶಿ ಹಸುಗಳ ಸಂರಕ್ಷಣೆ ಮುಖ್ಯ : ಡಾ. ಪ್ರಭುಸಾರಂಗದೇವ ಶ್ರೀ



■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ದೇಶಿ ಹಸುಗಳನ್ನು ಸಂರಕ್ಷಣೆ ಮಾಡುವುದು ಮುಖ್ಯ ಕಾರ್ಯವಾಗಿದೆ. ಅದಕ್ಕಾಗಿ ದಾನಿಗಳು ಮೇವು ಒದಗಿಸಲು ಮುಂದೆ ಬರಬೇಕೆಂದು ಸಾರಂಗಮಠ-ಗಚ್ಚಿನಮಠದ ಪೀಠಾಧಿಪತಿ ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ಕರೆ ನೀಡಿದ್ದರು.

ಈ ದಿಸೆಯಲ್ಲಿ ಎರಡು ಟ್ರ್ಯಾಲಿ ತುಂಬಿದ ಜೋಳದ ಮೇವನ್ನು ಪುರಸಭೆ ಮಾಜಿ ಅಧ್ಯಕ್ಷ, ಮನಗೂಳಿ ಆಸ್ಪತ್ರೆ ವೈದ್ಯ ಡಾ.ಶಾಂತವೀರ ಮನಗೂಳಿ, ಒಂದು ಟ್ರ್ಯಾಕ್ಟರ್ ಟ್ರ್ಯಾಲಿ ತುಂಬಿದ ಜೋಳದ ಮೇವನ್ನು ವಿಜಯಪುರದ ಬಿಎಲ್‌ಡಿಇ ಸಂಸ್ಥೆಯ ಡಾ.ಬಿ.ಎಂ.ಪಾಟೀಲ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಧ್ಯಾಪಕರು ಮತ್ತು ವೈದ್ಯರಾದ ಡಾ.ವಿಜಯಕುಮಾರ ವಾರದ ಸಾರಂಗಮಠದ ಗೋಶಾಲೆಗೆ ನೀಡಿದ್ದಾರೆ.

ದನ ಕರು, ತಳಿ ಆಕಳುಗಳ ಸಂರಕ್ಷಣೆ ಗೋಶಾಲೆಗೆ ಮೇವು ನೀಡಿದ ವೈದ್ಯರಿರ್ವ-ರಿಗೂ ಮತ್ತು ಹಸಿ ಮೆಕ್ಕೆಜೋಳದ ಕಣಕಿಯನ್ನು ನೀಡಿದ ನಗರದ ಮಲಘಾಣ ರಸ್ತೆಯಲ್ಲಿನ ಎಸ್.ಕೆ.ಪೆಟ್ರೋಲಿಯಂ ಮಾಲೀಕ ಕರಣಕುಮಾರ ಹಾಗರಗಿ ಅವರಿಗೆ ಸಾರಂಗಮಠದ ಪೀಠಾಧಿಪತಿ ಡಾ. ಪ್ರಭುಸಾರಂಗದೇವ ಶಿವಾಚಾರ್ಯರು ಆಶೀರ್ವದಿಸಿ ಶುಭ ಹಾರೈಸಿದ್ದಾರೆ.

# ರಾಜ್ಯಾದ್ಯಂತ ಸಮಾಜಸೇವೆ ಮಾಡುವ ಕಾರ್ಯಕರ್ತರನ್ನು ಹೊಂದಿರುವ ಬಿಜೆಪಿ

## ಕೊಲ್ಹಾರದಲ್ಲಿ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಚಲುವಾದಿ ನಾರಾಯಣಸ್ವಾಮಿ ಹೇಳಿಕೆ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಭಾರತೀಯ ಜನತಾ ಪಕ್ಷ ಸಾಮಾಜಿ-ಕ ಕ್ಷೇತ್ರದಲ್ಲಿ ರಾಜಕೀಯ ಗುರುತಿಸಿಕೊಳ್ಳಬೇಕು ಎನ್ನುವ ಕಾರ್ಯಕರ್ತರ ದೊಡ್ಡ ಪಡೆಯನ್ನೇ ಹೊಂದಿ ರಾಜ್ಯದ ಪ್ರತಿಯೊಂದು ಕ್ಷೇತ್ರದಲ್ಲಿಯೂ ಸಮಾಜ ಸೇವೆ ಮಾಡುವ ತಳಮಟ್ಟದ ಕಾರ್ಯಕರ್ತರನ್ನು ಗುರುತಿಸಿ ಬೆಳೆಸುವ ನಾಗರಿಕ ಪ್ರಜ್ಞೆಯನ್ನು ಮೂಡಿಸಿ ಉತ್ತಮ ಸಂಸ್ಕಾರದೊಂದಿಗೆ ಸಂಘಟಣೆಯಲ್ಲಿ ತೊಡಗಿಕೊಳ್ಳಲು ಮುನ್ನುಗ್ಗುವ ಕಾರ್ಯಕರ್ತರಿಗಾಗಿ ಪ್ರ.ಶಿಕ್ಷಣದಂತಹ ಕಾರ್ಯಾಗಾರವನ್ನು ಹಮ್ಮಿಕೊಳ್ಳುತ್ತದೆ ಎಂದು ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಚಲುವಾದಿ ನಾರಾಯಣಸ್ವಾಮಿ ಹೇಳಿದರು.

ಪಟ್ಟಣದ ವಿಶ್ವಭಾರತಿ ವಿದ್ಯಾವರ್ಧಕ ಸಂಸ್ಥೆಯ ಯಲ್ಲಮ್ಮದೇವಿ ಸಿಬಿಎಸ್‌ಸಿ ಶಾಲಾ ಆವರಣದಲ್ಲಿ ಬಸವನ ಬಾಗೇವಾಡಿ ಮತಕ್ಷೇತ್ರದ ಮಂಡಲ ಬಿಜೆಪಿ ಕಾರ್ಯಕರ್ತರಿಗಾಗಿ ಹಮ್ಮಿಕೊಂಡಿರುವ ಪಂಡೀತ ದೀನದಯಾಳ ಉಪಾಧ್ಯಾಯ ಪ್ರ.ಶಿಕ್ಷಣ ಮಹಾ ಅಭಿಯಾನ ಸಮಾರಂಭ ಮತ್ತು ಮಹಾವೀರರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ ಮಹಾವೀರ ಜಯಂತಿ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡುತ್ತಿದ್ದರು.

ಇಂದಿನ ಯುವ ಸಮೂಹದ ನಾಯಕರು ಹಿರಿಯರ ಮಾರ್ಗದರ್ಶನದಲ್ಲಿ ಪಕ್ಷದ ತತ್ವಸಿದ್ಧಾಂತವನ್ನು ಅಧ್ಯಯನ ಮಾಡಿ ಸಮಾಜಮುಖಿ ಕಾರ್ಯಗಳನ್ನು ಹೇಗೆ ಮಾಡಬೇಕು ಸಂಘಟಣೆಯ ದೃಷ್ಟಿಕೋನ ಹೇಗಿರಬೇಕು ಜನರೊಂದಿಗೆ ಸಂಪರ್ಕ ಮಾಡುವಾಗ ನಮ್ಮಗಳ ಮಾತಿನ ಶೈಲಿ ವರ್ತನೆ ನಡೆದುಕೊಳ್ಳುವ ರೀತಿಯ ಅಧ್ಯಯನವನ್ನು ಕಲಿಸಿಕೊಡಲು ಮತ್ತು ಬಿಜೆಪಿ ಪಕ್ಷದ ಕಾರ್ಯಕರ್ತರನ್ನು ಗಟ್ಟಿಯಾಗಿಸಲು ಪಕ್ಷವು ಸದಾವಕಾಲ ಇಂಥಹ ಕ್ರಿಯಾಶೀಲ ಚಟುವಟಿಕೆಗಳನ್ನು ಏರ್ಪಡಿಸುತ್ತಾ ಒಗ್ಗಟ್ಟಿನಲ್ಲಿ ಬಲವಿದೆ ಎನ್ನುವದನ್ನು ತೋರಿಸುವದೇ ಬಿಜೆಪಿ ಪಕ್ಷದ ಉದ್ದೇಶವಾಗಿದೆ ಎಂದರು.



ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಮಾತನಾಡಿ ಅತ್ಯಂತ ಕಠಿಣ ಪರಿಸ್ಥಿತಿಯಲ್ಲಿ ಜನಸಂಘವನ್ನು ಸ್ಥಾಪಣೆ ಮಾಡಿ ರಾಜಕೀಯವಾಗಿ ಗುರುತಿಸಿಕೊಂಡ ಹಿರಿಯರ ತಪಸ್ಸಿನ ಫಲವಾಗಿ ದೀಪದ ಗುರುತಿನಿಂದ ಕಮಲದ ಗುರುತಿನೊಂದಿಗೆ ರಾಜ್ಯ ರಾಷ್ಟ್ರಮಟ್ಟದಲ್ಲಿ ಕ್ರಿಯಾಶೀಲ ಕಾರ್ಯಕರ್ತರ ಪಡೆಯನ್ನು ತಯಾರು ಮಾಡಿರುವ ಆ ಮಹಣೀಯರ ತ್ಯಾಗದ ಪ್ರತಿರೂಪವಾಗಿರುವ ಪಕ್ಷವನ್ನು ಮತ್ತಷ್ಟು ಗಟ್ಟಿಗೊಳಿಸಿ ದೇಶಕ್ಕಾಗಿ ರಾಜ್ಯದ ಹಿತಕ್ಕಾಗಿ ಬಿಜೆಪಿ ಕಾರ್ಯಕರ್ತರು ಪ್ರತಿಯೊಂದು ಊರಿನ ಭೂತ್ ಮಟ್ಟದಿಂದ ವಾರ್ಡಗಳಲ್ಲಿ ತಮ್ಮದೇ ಆದ ಸಾರ್ವಜನಿಕ ಸೇವೆ ಮಾಡಿ ಬೆಳೆಯಲು ಪಕ್ಷವು ತಮ್ಮೊಂದಿಗೆ ಸಹಕಾರ ಕೊಡುತ್ತದೆ ಎಂದರು.

ವಿಶ್ವಮಟ್ಟದಲ್ಲಿ ಮಧ್ಯಪ್ರಾಚ್ಯದ ಪ್ರಾಂತಗಳಲ್ಲಿ ನಡೆಯುತ್ತಿರುವ ವಿದ್ಯಮಾನಗಳನ್ನು ಗಮನಿಸಿದರೆ ಭರತ ಖಂಡದಲ್ಲಿ ನಾವುಗಳು ನೆಮ್ಮದಿಯಾಗಿ ಜೀವನ ಸಾಗಿಸುತ್ತಿರುವದನ್ನು ಗಮನಿಸಿದಾಗ ಬಿಜೆಪಿ ಪಕ್ಷವು ರಾಷ್ಟ್ರಕ್ಕೆ ಒಬ್ಬ ದಿಟ್ಟ ನಾಯಕ ನರೇಂದ್ರ ಮೋದಿಯವರನ್ನು ಕೊಟ್ಟಿರುವದು ಸಾರ್ಥಕವೆಣಿಸುತ್ತದೆ ಅಂತಹ ನಾಯಕರ ಮುಂದಾಳತ್ವದಲ್ಲಿ ನಾವು ನೀವುಗಳು ಮತ್ತಷ್ಟು ಕ್ರಿಯಾಶೀಲರಾಗಿ ಪಕ್ಷದ ಬಲವರ್ಧನೆಗಾಗಿ ನಿರಂತರವಾಗಿ ಶ್ರಮಿಸುವ ಸಲುವಾಗಿಯೇ ಏರ್ಪಡಿಸಿರುವ ಕಾರ್ಯಕರ್ತರ ಪ್ರ.ಶಿಕ್ಷಣ ಅಭಿಯಾನದ ಸದುಪಯೋಗವನ್ನು ಯುವಕ ಯುವತಿಯರು ಪಡೆದುಕೊಳ್ಳಬೇಕು ಎಂದರು.

ಈ ಸಂಧರ್ಬದಲ್ಲಿ ಮಂಡಲ ಅಧ್ಯಕ್ಷ ಸಿದ್ದರಾಮು ಕಾಖಂಡಕಿ, ಚಂದ್ರಶೇಖರ ಕವಟಗಿ, ಮಲ್ಲಿಕಾರ್ಜುನ ದೇವರಮನಿ, ಶ್ರೀಧರ ಬಿಜ್ಜರಗಿ, ಡಾ॥ ಸಂಗಮೇಶ ಗೂಗ್ಯಾಳ, ಚಿದಾನಂದ ಚಲವಾದಿ, ವಿಜಯ ಪೂಜಾರಿ, ಪಟ್ಟಣ ಪಂಚಾಯತ ಸದಸ್ಯರಾದ ಶ್ರೀಶೈಲ ಅಥಣಿ, ಬಾಬು ಭಜಂತ್ರಿ, ಕಲ್ಲಪ್ಪ ಸೊನ್ನದ, ಪದ್ಮಾವತಿ ಗುಡಿ, ಶಾಂತಾಬಾಯಿ ಬೀಳಗಿ, ಪರವೀನಬಾನು ಟಕ್ಕಳಕಿ, ಜಗದೀಶ ಸುಣಗದ, ಸಗರೆಪ್ಪ ಮುರಣಾಳ, ಆಶೋಕ ಬಾಗೇವಾಡಿ ಅನೇಕರು ಉಪಸ್ಥಿತರಿದ್ದರು.

# ಸರ್ಕಾರಿ ಆಸ್ಪತ್ರೆಗೆ ಮಹಿಳಾ ಆಯೋಗ ಅಧ್ಯಕ್ಷೆ ಡಾ.ನಾಗಲಕ್ಷ್ಮಿ ಭೇಟಿ

■ ಉದಯ ರಶ್ಮಿ ದಿನಪತ್ರಿಕೆ

ಅಥಣಿ: ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರಾದ ಡಾ.ನಾಗಲಕ್ಷ್ಮಿ ಚೌಧರಿ ಅವರು ಅಥಣಿ ಸರ್ಕಾರಿ ಸಾರ್ವಜನಿಕ ಆಸ್ಪತ್ರೆಗೆ ಭೇಟಿ ನೀಡಿ, ಪರಿಶೀಲಿಸಿದರು.

ಈ ವೇಳೆ ರೋಗಿಗಳು, ಗರ್ಭಿಣಿಯರು ಹಾಗೂ ಬಾಣಂತಿಯರೊಂದಿಗೆ ಸಂವಾದ ನಡೆಸಿ ಆಸ್ಪತ್ರೆಯ ಕಾರ್ಯವೈಖರಿಯ ಬಗ್ಗೆ ಮಾಹಿತಿ ಪಡೆದರು.

ನಂತರ ಮಾಧ್ಯಮದವರೊಂದಿಗೆ ಮಾತನಾಡಿ, ಅಥಣಿ ಸರ್ಕಾರಿ ಆಸ್ಪತ್ರೆಯು ಅತ್ಯಂತ ಸ್ವಚ್ಛವಾಗಿದ್ದು, ಮಾದರಿಯಾಗಿ ಕಾರ್ಯನಿರ್ವಹಿಸುತ್ತಿದೆ ಇಲ್ಲಿ ತಿಂಗಳಿಗೆ 300 ರಿಂದ 400 ಹೆ-ರಿಗೆಗಳು ನಡೆಯುತ್ತಿರುವುದು ಹೆಮ್ಮೆಯ ವಿಷಯ. ರೋಗಿಗಳು ಹಾಗೂ ಸಾರ್ವಜನಿಕರು ಇಲ್ಲಿನ ವೈದ್ಯರ ಸೇವೆಯ ಬಗ್ಗೆ ಪ್ರಶಂಸೆ ವ್ಯಕ್ತಪಡಿಸಿದ್ದಾರೆ. ಆಸ್ಪತ್ರೆಯಲ್ಲಿ ಕುಡಿಯುವ ನೀರು

ಹಾಗೂ ಬಿಸಿನೀರಿನ ವ್ಯವಸ್ಥೆ ಸಮರ್ಪಕವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು.

ಅಲ್ಲದೆ, ನೂತನವಾಗಿ ನಿರ್ಮಾಣವಾಗುತ್ತಿರುವ ತಾಯಿ ಮತ್ತು ಮಕ್ಕಳ ಆಸ್ಪತ್ರೆಯ ಕಾಮಗಾರಿಯನ್ನು ಶ್ಲಾಘಿಸಿದರು.

ಶೌಚಾಲಯ ದುರಸ್ತಿ: ಆಸ್ಪತ್ರೆಯ ಶೌಚಾಲಯಗಳಲ್ಲಿನ ಸಿಂಕ್‌ಗಳು



ಬಂದ್ ಆಗಿದ್ದು, ಅವುಗಳನ್ನು ಕೂಡಲೇ ಸರಿಪಡಿಸುವಂತೆ ಸೂಚಿಸಿದರು.

ಔಷಧಿಗಳಲಭ್ಯತೆ: ಕೆಲವರು ಹೊರಗಿನ ಔಷಧಿ ಬರೆಯುತ್ತಿದ್ದಾರೆ

**ಅಥಣಿ ಸರ್ಕಾರಿ ಆಸ್ಪತ್ರೆಯಲ್ಲಿ ರೋಗಿಗಳು ಗರ್ಭಿಣಿ ಬಾಣಂತಿಯರೊಂದಿಗೆ ಡಾ.ನಾಗಲಕ್ಷ್ಮಿ ಚೌಧರಿ ಸಂವಾದ**

ಎಂದು ದೂರಿದ್ದಾರೆ. ಅನುದಾನದ ಕೊರತೆಯಿಂದ ಕೆಲವು ಔಷಧಿಗಳ ಕೊರತೆ ಇರಬಹುದು, ಈ ಬಗ್ಗೆ ಸರಕಾರದ ಮಟ್ಟದಲ್ಲಿ ಚರ್ಚಿಸಿ ಪರಿಹಾರ ಒದಗಿಸಲಾಗುವುದು ಎಂದು ಭರವಸೆ ನೀಡಿದರು.

ಈ ವೇಳೆ ಆಸ್ಪತ್ರೆಯ ವೈದ್ಯಾಧಿಕಾರಿ ಡಾ.ಬಸಗೌಡಾ ಕಾಗೆ,

ತಾಲೂಕಾ ದಂಡಾಧಿಕಾರಿ ಸಿದರಾಯ ಭೋಸಗಿ, ತಾ.ಪಂ. ಅಧಿಕಾರಿ ಶಿವಾನಂದ ಕಲ್ಲಾಪುರ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಅಧಿಕಾರಿ ಮಂಜುನಾಥ ಸೌಂದಲಗೇಕರ, ಪುರಸಭೆ ಮುಖ್ಯಾಧಿಕಾರಿ ಅಶೋಕ ಗುಡಿಮನಿ ಆಸ್ಪತ್ರೆಯ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

## ದುಡ್ಡು ಪಡೆಯುವ ಆರೋಪಕ್ಕೆ ಪ್ರತಿಕ್ರಿಯೆ

ಹೆರಿಗೆಗೆ ಹಣ ಪಡೆಯುತ್ತಾರೆ ಎಂಬ ಆರೋಪಗಳ ಕುರಿತು ಉತ್ತರಿಸಿದ ಡಾ.ನಾಗಲಕ್ಷ್ಮಿ ಅವರು, "ನಾನು ಅನೇಕ ಬಾಣಂತಿಯರಿಗೆ ವಿಚಾರಿಸಿದ್ದೇನೆ, ಯಾರೂ ಕೂಡ ಹಣ ನೀಡಿದ್ದಾಗಿ ದೂರು ನೀಡಿಲ್ಲ. ವೈದ್ಯರ ಮೇಲೆ ಆರೋಪ ಮಾಡುವಾಗ ಸೂಕ್ತ ಸಾಕ್ಷ್ಯಗಳಿರಬೇಕು. ಇಲ್ಲದಿದ್ದರೆ ಉತ್ತಮವಾಗಿ ಸೇವೆ ಸಲ್ಲಿಸುತ್ತಿರುವ ವೈದ್ಯರ ನೈತಿಕ ಸ್ಥೈರ್ಯ ಕುಗ್ಗುತ್ತದೆ. ಒಂದು ವೇಳೆ ಸಾಕ್ಷ್ಯಧಾರಿತ ದೂರುಗಳಿದ್ದರೆ ಖಂಡಿತವಾಗಿಯೂ ಮೇಲಾಧಿಕಾರಿಗಳ ಗಮನಕ್ಕೆ ತಂದು ಕ್ರಮಕೈಗೊಳ್ಳಲು ತಿಳಿಸುವುದಾಗಿ ಸ್ಪಷ್ಟಪಡಿಸಿದರು.

## ಸರ್ಕಾರಿ ಯೋಜನೆಗಳ ಮಾಹಿತಿಯ ಕೊರತೆ : ಅಸಮಾಧಾನ

ಆಸ್ಪತ್ರೆಯ ಉತ್ತಮ ಸೇವೆಯ ನಡುವೆಯೂ ಸಾರ್ವಜನಿಕರಿಗೆ ಸರ್ಕಾರದ ವಿವಿಧ ಆರೋಗ್ಯ ಯೋಜನೆಗಳ ಬಗ್ಗೆ ಸರಿಯಾದ ಮಾಹಿತಿ ಇಲ್ಲದಿರುವುದಕ್ಕೆ ಡಾ.ನಾಗಲಕ್ಷ್ಮಿ ಬೇಸರ ವ್ಯಕ್ತಪಡಿಸಿದರು. ಜನರಿಗೆ ಯೋಜನೆಗಳ ಮಾಹಿತಿ ಸಿಗದಿರುವುದು ವಿಷಾದನೀಯ.

ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳುವಂತೆ ಮೇಲಧಿಕಾರಿಗಳಿಗೆ ಸೂಚಿಸುತ್ತೇನೆ, ಎಂದ ಅವರು, ಸ್ಥಳದಲ್ಲಿದ್ದ ತಾಲೂಕು ವೈದ್ಯಾಧಿಕಾರಿ ಡಾ. ಬಸಗೌಡ ಕಾಗೆ ಅವರಿಗೆ ಆಸ್ಪತ್ರೆಯ ಆವರಣದಲ್ಲಿ ಮಾಹಿತಿ ಫಲಕಗಳನ್ನು (ಡಿಸ್‌ಪ್ಲೇ) ಅಳವಡಿಸಲು ಸೂಚನೆ ನೀಡಿದರು.

# ತ್ರಿವಿಧ ದಾಸೋಹಿ ತೋಂಟದಾರ್ಯ ಸಿದ್ದಲಿಂಗೇಶ್ವರ ಜಾತ್ರೆ

**ನಾಳೆ (ಎಪ್ರಿಲ್ ೦2, ಗುರುವಾರ) "ಗದಗ ತ್ರಿವಿಧ ದಾಸೋಹಿ ತೋಂಟದಾರ್ಯ ಸಿದ್ದಲಿಂಗೇಶ್ವರ ಸ್ವಾಮಿಗಳ ಜಾತ್ರೆ" ಪ್ರಯುಕ್ತ ಈ ವಿಶೇಷ ಲೇಖನ**

■ ಉದಯರಶ್ಮಿ ದಿನಪತ್ರಿಕೆ

ಬಸವಾದಿ ಪ್ರಮಥರ ತಪೋಭೂಮಿ, ಮುದ್ರಣ ಕಾಶಿ ಎಂದೇ ಹೆಸರುವಾಸಿಯಾದಂತಹ ಗದಗದ ಜಗದ್ಗುರು ತೋಂಟದಾರ್ಯ ಸಿದ್ಧಲಿಂಗೇಶ್ವರ ಮಹಾಸ್ವಾಮಿಗಳ ಜಾತ್ರೆಯು ಉತ್ತರ ಕರ್ನಾಟಕದ ಅತ್ಯಂತ ದೊಡ್ಡ ಮತ್ತು ಪ್ರಸಿದ್ಧ ಸಾಂಸ್ಕೃತಿಕ ಹಾಗೂ ಧಾರ್ಮಿಕ ಉತ್ಸವಗಳಲ್ಲಿ ಒಂದಾಗಿದೆ. ಎಪ್ರಿಲ್ 02 ರಂದು ಗದಗದಲ್ಲಿ ನಡೆಯಲಿರುವ ಈ ಜಾತ್ರೆಯು ಅತ್ಯಂತ ಸಡಗರ-ಸಂಭ್ರಮದಿಂದ ಜರುಗುತ್ತದೆ.

ಈ ಜಾತ್ರೆಯ ಪ್ರಮುಖ ವೈಶಿಷ್ಟ್ಯಗಳು ಹೀಗಿವೆ. ಐತಿಹಾಸಿಕ ಮತ್ತು ಧಾರ್ಮಿಕ ಮಹತ್ವ ಈ ಜಾತ್ರೆಯು 15ನೇ ಶತಮಾನದ ಶ್ರೇಷ್ಠ ಶಿವಶರಣರಾದ ಶ್ರೀ ತೋಂಟದ ಸಿದ್ಧಲಿಂಗ ಶಿವಯೋಗಿಗಳ ಸ್ಮರಣಾರ್ಥವಾಗಿ ನಡೆಯುತ್ತದೆ.

ಗದುಗಿನ ಶ್ರೀ ತೋಂಟದಾರ್ಯ ಮಠವು ಕೇವಲ ಧಾರ್ಮಿಕ





ಕೇಂದ್ರವಾಗಿರದೆ, ಶೈಕ್ಷಣಿಕ ಮತ್ತು ಸಾಮಾಜಿಕ ಕ್ರಾಂತಿಯ ಕೇಂದ್ರವಾಗಿಯೂ ಹೆಸರುವಾಸಿಯಾಗಿದೆ.

**ಜಾತ್ರೆಯ ಪ್ರಮುಖ ಆಕರ್ಷಣೆಗಳು**

ರಥೋತ್ಸವ: ಜಾತ್ರೆಯ ಮುಖ್ಯ ಆಕರ್ಷಣೆಯೇ ಭವ್ಯವಾದ ರಥೋತ್ಸವ. ಸಾವಿರಾರು ಭಕ್ತರು ಸೇರಿ ಸಿದ್ಧಲಿಂಗೇಶ್ವರನಿಗೆ ಹರ ಹರ ಮಹದೇವ ಎಂಬ ಘೋಷಣೆಗಳೊಂದಿಗೆ ರಥವನ್ನು ಎಳೆಯುತ್ತಾರೆ.

**ಕೃಷಿ ಮೇಳ ಮತ್ತು ಪ್ರದರ್ಶನ**

ಇಲ್ಲಿ ರೈತರಿಗಾಗಿ ವಿಶೇಷ ಕೃಷಿ ಮೇಳಗಳು ಮತ್ತು ಜಾನುವಾರು ಪ್ರದರ್ಶನಗಳು ನಡೆಯುತ್ತವೆ.

**ಸಾಂಸ್ಕೃತಿಕ ಕಾರ್ಯಕ್ರಮಗಳು**

ಪ್ರತಿದಿನ ಸಂಜೆ ಮಠದ ಆವರಣದಲ್ಲಿ ನಾಟಕಗಳು, ಜಾನಪದ ಸಂಗೀತ, ಭಜನೆ ಮತ್ತು ಪ್ರವಚನಗಳು ನಡೆಯುತ್ತವೆ. ಇಲ್ಲಿ ರಾಜ್ಯದ ಬೇರೆ ಬೇರೆ ಜಿಲ್ಲೆಗಳ ಕಲಾ ಮೇಳಗಳು ಪ್ರದರ್ಶನ ನೀಡುತ್ತವೆ ಮತ್ತು ವಚನ ಕಂಠ ಪಾಠ ಸ್ಪರ್ಧೆ ಈ ಮಠದ ವಿಶೇಷತೆ..

**ಭಾವೈಕ್ಯತೆಯ ಜಾತ್ರೆ**

ಈ ಜಾತ್ರೆಯಲ್ಲಿ ಜಾತಿ-ಮತದ ಭೇದವಿಲ್ಲದೆ ಎಲ್ಲಾ ಧರ್ಮದ ಜನರು ಪಾಲ್ಗೊಳ್ಳುವುದು ಇಲ್ಲಿನ ವಿಶೇಷ. ಮಠದ ದ್ವಾರಬಾಗಿಲು ಸದಾ ಸರ್ವಧರ್ಮಿಯರನ್ನು ಸ್ವಾಗತಿಸುತ್ತದೆ

## ಶಿವಯೋಗ ಮತ್ತು ಸಮಾಜ ಸೇವೆಯ ಸಂಕೇತ

ಗದುಗಿನ ಶ್ರೀ ತೋಂಟದಾರ್ಯ ಸಿದ್ಧಲಿಂಗೇಶ್ವರರು ಕೇವಲ ಒಬ್ಬ ವ್ಯಕ್ತಿಯಲ್ಲ, ಅವರು "ಶಿವಯೋಗ ಮತ್ತು ಸಮಾಜ ಸೇವೆಯ" ಸಂಕೇತ. ಅವರ ಜಾತ್ರೆಯು ಶ್ರಮಜೀವಿಗಳಿಗೆ ವಿಶ್ರಾಂತಿ ಮತ್ತು ಆಧ್ಯಾತ್ಮಿಕ ಶಕ್ತಿಯನ್ನು ನೀಡುವ ಸುಂದರ ಸುದಿನ ಎಂದು ಹೇಳಬಹುದು

## ಶುಚಿ ಮತ್ತು ರುಚಿಯಾದ ಪ್ರಸಾದ ಸೇವೆ

ನೀವು ಜಾತ್ರೆಯ ಸಮಯದಲ್ಲಿ ಅಲ್ಲಿನ ಪ್ರಸಾದ (ದಾಸೋಹ) ವನ್ನು ತಪ್ಪದೇ ಸವಿಯಬೇಕು. ಅಲ್ಲಿನ ಬದನೆಕಾಯಿ ಪಲ್ಯ ಮತ್ತು ರೊಟ್ಟಿಯ ರುಚಿ ಇಡೀ ರಾಜ್ಯದಲ್ಲೇ ಹೆಸರುವಾಸಿಯಾಗಿದೆ. ಗೋಧಿ ಹುಗ್ಗಿ, ಬಿಸಿಬೇಳೆಭಾತ್ ಸೇರಿದಂತೆ ಇನ್ನೂ ಅನೇಕ ತರಹದ ರುಚಿ ಮತ್ತು ಶುಚಿಯಾದ ಪ್ರಸಾದ ಸೇವೆಯನ್ನು ಶ್ರೀಮಠ ಜಾತ್ರೆಯ ಸಮಯದಲ್ಲಿ ಮಾಡುತ್ತ ಬಂದಿದೆ.

**ಪುಸ್ತಕ ಪ್ರದರ್ಶನ**

ತೋಂಟದಾರ್ಯ ಮಠವು ಸಾಹಿತ್ಯಕ್ಕೆ ಹೆಚ್ಚಿನ ಒತ್ತು ನೀಡುವುದ-ರಿಂದ, ಜಾತ್ರೆಯ ಸಮಯದಲ್ಲಿ ದೊಡ್ಡ ಮಟ್ಟದ ಪುಸ್ತಕ ಪ್ರದರ್ಶನ ಮತ್ತು ಮಾರಾಟ ಇರುತ್ತದೆ. ಮತ್ತು ಶರಣರ ಜೀವನ ಚರಿತ್ರೆಯ ಪುಸ್ತಕಗಳು ಲಭ್ಯವಿರುತ್ತವೆ

**ಭಕ್ತರಿಗೆ ಸೌಲಭ್ಯಗಳು**

ಜಾತ್ರೆಯ ಅವಧಿಯಲ್ಲಿ ಮಠದ ವತಿಯಿಂದ ಭಕ್ತಾದಿಗಳಿಗೆ ನಿರಂತರವಾಗಿ ದಾಸೋಹ (ಅನ್ನಪ್ರಸಾದ) ವ್ಯವಸ್ಥೆ ಇರುತ್ತದೆ.

ನೀವು ಈ ಬಾರಿ ಜಾತ್ರೆಗೆ ಭೇಟಿ ನೀಡುವ ಯೋಜನೆ ಹೊಂದಿದ್ದರೆ, ರಥೋತ್ಸವದ ನಿಖರವಾದ ದಿನ ದವನದ ಹುಣ್ಣಿಮೆಯ ಸಾಯಂಕಾಲ ಆಗಮಿಸಬೇಕು. ಅಂದು ಸಂಜೆ ತೇರನ್ನು ಎಳೆಯುತ್ತಾರೆ

**ಶರಣ ಸಾಹಿತ್ಯದ ಸಂಭ್ರಮ**

ಮಠದ ವತಿಯಿಂದ ಪ್ರಕಟವಾಗುವ ನೂರಾರು ಪುಸ್ತಕಗಳು ಜಾತ್ರೆಯ ಸಮಯದಲ್ಲಿ ವಿಶೇಷ ರಿಯಾಯಿತಿಯಲ್ಲಿ ಸಿಗುತ್ತವೆ. "ಮನೆಯಲ್ಲೊಂದು ಗ್ರಂಥಾಲಯ" ಎಂಬ ಘೋಷಣೆಯಡಿ ಜನ-ರಿಗೆ ಪುಸ್ತಕ ಓದುವ ಹವ್ಯಾಸ ಬೆಳೆಸಲು ಈ ಜಾತ್ರೆ ಒಂದು ದೊಡ್ಡ ವೇದಿಕೆಯಾಗಿದೆ.

**ಸಾಂಸ್ಕೃತಿಕ ಕಲೆಗಳ ಸಂಗಮ**

ಜಾತ್ರೆಯಲ್ಲಿ ಕೇವಲ ಪೂಜೆ-ಪುನಸ್ಕಾರಗಳಷ್ಟೇ ಇರುವುದಿಲ್ಲ. ಬದಲಾಗಿ ದೊಡ್ಡಾಟ ಮತ್ತು ಸಣ್ಣಾಟಗಳು ರಾತ್ರಿಯಿಡೀ ನಡೆಯುವ




ಈ ನಾಟಕಗಳು ಜನಪದ ಕಲೆಯನ್ನು ಜೀವಂತವಾಗಿರಿಸಿವೆ.

ಲಾವಣಿ ಮತ್ತು ತತ್ವಪದಗಳು: ಭಕ್ತರು ಗುಂಪು ಗುಂಪಾಗಿ ಕುಳಿತು ತತ್ವಪದಗಳನ್ನು ಹಾಡುವುದು ಇಲ್ಲಿನ ಸಾಂಪ್ರದಾಯಿಕ ವೈಭವ.

ಮರುದಿನ ಪಲ್ಲಕ್ಕಿ ಉತ್ಸವದಂದು ಶ್ರೀಗಳು ಪ್ರಮುಖ ಬೀದಿಗಳಲ್ಲಿ ಪಾದಯಾತ್ರೆಯಲ್ಲಿ ಪಾಲ್ಗೊಂಡು ಭಕ್ತ ಜನರನ್ನು ಆಶೀರ್ವದಿಸುತ್ತಾರೆ.. ಅಷ್ಟೇ ಅಲ್ಲದೆ ಸಮಾಜದ ವಿವಿಧ ಕ್ಷೇತ್ರದಲ್ಲಿ ಸಾಧನೆ ಮಾಡಿದಂತಹ ವ್ಯಕ್ತಿಗಳನ್ನು ಗುರುತಿಸಿ ಶ್ರೀಮಠದಿಂದ ಸನ್ಮಾನ ಮಾಡುವಂತಹ ಕಾರ್ಯಕ್ರಮವನ್ನು ಹಮ್ಮಿಕೊಂಡಿರುತ್ತಾರೆ.

ಲೇಖನ

■ ಶಿಲ್ಪಾ ಮೃತ್ಯುಂಜಯ. ಮಿಣಜಗಿ
ಸಹ ಶಿಕ್ಷಕಿ
ಕೆ.ಇ.ಬೋರ್ಡ್ ಸೆಂಟ್ರಲ್ ಸ್ಕೂಲ್
ಧಾರವಾಡ



**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR